# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 309 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 02–07–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 Issue - 309 | Title- Code: KARKAN 28269 | Chitradurga | Date: 02-07-2024 Tuesday | Page: 4 | Price: Rs. 2-00

**ಒಳಪುಟದ ಸುದ್ದಿಗಳು**

ಜೀವನಮಟ್ಟ ಸುಧಾರಣೆಗೆ ದತ್ತಾಂಶ ಬಹಳ ಮುಖ್ಯ ಪಾತ್ರ ವಹಿಸಲಿದೆ: ಚನ್ನಬಸಪ್ಪ **2**

ರೈತ ಯೋಜನೆಗಳ ಸದುಪಯೋಗ ಪಡೆದುಕೊಳ್ಳಲು ಶಾಸಕ ರಘುಮೂರ್ತಿ ಕರೆ **3**

ಮಾದಕ ವಸ್ತುಗಳ ನಿಯಂತ್ರಣಕ್ಕೆ ವಿವಿಧ ಇಲಾಖಾ ಅಧಿಕಾರಿಗಳ ತಂಡ ರಚನೆ: ಡಿಸಿ **4**

ಸುದ್ದಿ, ಜಾಹಿರಾತಿಗೆ 9686622252

**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಮದಕರಿನಾಯಕ ಜಯಂತಿ ಸರ್ಕಾರವೇ ಆಚರಿಸಲಿ: ಪ್ರಸನ್ನಾನಂದ ಶ್ರೀ ಒತ್ತಾಯ





» ಚಿತ್ರದುರ್ಗ

ಮೊಘಲರ ಆಳ್ವಿಕೆಯನ್ನು ಸಮರ್ಥವಾಗಿ ಎದುರಿಸಿ ಹಿಮ್ಮೆಟ್ಟಿಸಿದ ಚಿತ್ರದುರ್ಗದ ದೊರೆ ರಾಜಾವೀರಮದಕರಿನಾಯಕನ ಜಯಂತಿಯನ್ನು ಸರ್ಕಾರವೇ ಆಚರಿಸಬೇಕೆಂದು ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದ ಸ್ವಾಮೀಜಿ ಒತ್ತಾಯಿಸಿದರು.

ತ.ರಾ.ಸು.ರಂಗಮಂದಿರದಲ್ಲಿ ನಡೆದ ರಾಜಾವೀರ ಮದಕರಿನಾಯಕನ 270 ನೇ ಪಟ್ಟಾಭಿಷೇಕ ಮಹೋತ್ಸವದ ಸಾನಿಧ್ಯ ವಹಿಸಿ ಮಾತನಾಡಿದರು.

ಚಿತ್ರದುರ್ಗಕ್ಕೆ ಇತಿಹಾಸ, ಪ್ರಾಚೀನ ಪರಂಪರೆಯಿದೆ. ವಿಜಯನಗರದ ದೊರೆ ಕಲ್ಬುರ್ಗಿಯನ್ನು ಗೆದ್ದುಕೊಡುವಂತೆ ಮತ್ತಿ ತಿಮ್ಮಣ್ಣ ನಾಯಕನನ್ನು ಅವಲತ್ತುಕೊಳ್ಳುತ್ತಾರೆ. ಹನ್ನೆರಡು ವರ್ಷದ ಬಾಲಕ ರಾಜವೀರಮದಕರಿನಾಯಕನಿಗೆ ಪಟ್ಟ ಕಟ್ಟಿದಾಗ ಎರಡು ವರ್ಷಗಳ ಕಾಲ ತರಬೇತಿ ನೀಡಿ ನಂತರ ಅಸುನೀಗಿದ ಗಂಡೋಬಳವ್ವ ನಾಗತಿಯ ಶೌರ್ಯ, ಪರಾಕ್ರಮವನ್ನು ನೆನಪಿಸಿಕೊಳ್ಳಬೇಕು ಎಂದು ಸ್ವಾಮೀಜಿ ಹೇಳಿದರು.

ಚಿತ್ರದುರ್ಗದಲ್ಲಿ ಮದಕರಿನಾಯಕ ಥೀಂ ಪಾರ್ಕ್ ಆಗಬೇಕು. ನಗರದಲ್ಲಿ ಹದಿಮೂರು ಪಾಳೆಯಗಾರರ ಸರ್ಕಲ್ ನಿರ್ಮಿಸಬೇಕಿದೆ. ಐತಿಹಾಸಿಕ ಚಿತ್ರದುರ್ಗವನ್ನಾಳಿದ ರಾಜವೀರ ಮದಕರಿನಾಯಕನ ಇತಿಹಾಸ ಪಠ್ಯದಲ್ಲಿ ಸೇರ್ಪಡೆಯಾಗಬೇಕು. ಇಲ್ಲದಿದ್ದಲ್ಲಿ ಮುಂದಿನ ಪೀಳಿಗೆಗೆ ಇತಿಹಾಸವನ್ನು ಮರೆ ಮಾಚಿದಂತಾಗುತ್ತದೆ. ರಾಜ್ಯ ಸರ್ಕಾರ ಈ ವಿಚಾರವನ್ನು ಗಂಭೀರವಾಗಿ ತೆಗೆದುಕೊಳ್ಳಬೇಕೆಂದು ಸ್ವಾಮೀಜಿ ಆಗ್ರಹಿಸಿದರು.

ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮಾತನಾಡಿ ಪರಾಕ್ರಮಿ ರಾಜಾವೀರ ಮದಕರಿನಾಯಕನ ಇತಿಹಾಸ, ಸಾಹಸ, ಶೌರ್ಯವನ್ನು ಮುಂದಿನ ಪೀಳಿಗೆಗೆ ತಿಳಿಸುವುದರಿಂದ ಇತಿಹಸವನ್ನು ಉಳಿಸಬೇಕಿದೆ. ಚಿತ್ರದುರ್ಗದಲ್ಲಿ ಮದಕರಿನಾಯಕನ ಥೀಂ ಪಾರ್ಕ್ ಆಗಬೇಕು. ಯಾವುದೇ ರಾಜಕೀಯ ಬೆರೆಸದೆ ಎಲ್ಲಾ ಪಕ್ಷಗಳವರು ಇದಕ್ಕೆ ಒತ್ತು ಕೊಡಬೇಕೆಂದು ವಿನಂತಿಸಿದರು.

ರಾಜಾವೀರ ಮದಕರಿನಾಯಕನಲ್ಲಿ ಸಾಹಸ, ಶೌರ್ಯವನ್ನು ತುಂಬಿದ ಗಂಡೋಬಳವ್ವ ನಾಗತಿಯನ್ನು ಸ್ಮರಿಸುವುದು ಅಷ್ಟೆ ಮುಖ್ಯ ಎಂದರು.

ಕೆ.ಡಿ.ಪಿ. ಸದಸ್ಯ ಕೆ.ಸಿ.ನಾಗರಾಜ್ ಮಾತನಾಡುತ್ತ ಮುಂದಿನ ವರ್ಷ 271 ನೇ ಪಟ್ಟಾಭಿಷೇಕ ವಾಲ್ಮೀಕಿ ಭವನದಲ್ಲಿ ನಡೆಯಬೇಕು. ಅದಕ್ಕೆ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ. ಚಿತ್ರದುರ್ಗದ ಕೋಟೆಗೆ ಪ್ರವೇಶಿಸಲು ನೇರವಾದ ದಾರಿ ಆಗಬೇಕು. ರಾಜಾವೀರ ಮದಕರಿನಾಯಕನ ಇತಿಹಾಸ ಪಠ್ಯದಲ್ಲಿ ಸೇರಬೇಕೆಂಬ ನಾಯಕ ಸಮಾಜದ ಬೇಡಿಕೆಯನ್ನು ಶಾಸಕ ಕೆ.ಸಿ.ವೀರೇಂದ್ರಪಪ್ಪಿರವರ ಗಮನಕ್ಕೆ ತರುವುದಾಗಿ ಭರವಸೆ ನೀಡಿದರು.

ಸಂಸದ ಗೋವಿಂದ ಕಾರಜೋಳರವರ ಪುತ್ರ ಉಮೇಶ್ ಕಾರಜೋಳ ಮಾತನಾಡಿ ಚಿತ್ರದುರ್ಗದ ಕೋಟೆ ಆಳಿದ ರಾಜಾವೀರ ಮದಕರಿನಾಯಕನ ಇತಿಹಾಸ ಪಠ್ಯದಲ್ಲಿ ಸೇರಬೇಕೆಂಬ ನಿಮ್ಮ ಬೇಡಿಕೆ ಈಡೇರಿಕೆಗೆ ದೆಹಲಿಗೆ ನಿಯೋಗ ಹೊರಡೋಣ ಎನ್ನುವ ಸಲಹೆ ನೀಡಿದರು.

ತಾಲ್ಲೂಕು ನಾಯಕ ಸಮಾಜದ ಅಧ್ಯಕ್ಷ ಬಿ.ಕಾಂತರಾಜ್ ಮಾತನಾಡುತ್ತ ಪಾಳೆಯಗಾರರ ಇತಿಹಾಸವನ್ನು ಮರೆಮಾಚಬಾರದೆನ್ನುವ ಕಾರಣಕ್ಕಾಗಿ ಮದಕರಿನಾಯಕನ ಜಯಂತಿ, ಸ್ಮರಣೋತ್ಸವ, ಪಟ್ಟಾಭಿಷೇಕ ಆಚರಿಸಿಕೊಂಡು ಬರುತ್ತಿದ್ದೇವೆ. ಇತಿಹಾಸ ಸೃಷ್ಟಿಸಿದವರನ್ನು ಗುರುತಿಸಿ ರಕ್ಷಿಸದಿದ್ದರೆ ಮುಂದಿನ ಪೀಳಿಗೆಗೆ ದ್ರೋಹವೆಸಗಿದಂತಾಗುತ್ತದೆ. ಅಪ್ರತಿಮ ಶೂರರನ್ನು ನೆನಪಿಸಿಕೊಳ್ಳಬೇಕು. ಗಂಡೋಬಳವ್ವ ನಾಗತಿ ಇತಿಹಾಸ ಪರಾಕ್ರಮವನ್ನು ಮೆಲಕು ಹಾಕಬೇಕಿದೆ ಎಂದು ಹೇಳಿದರು.

ಚಿತ್ರದುರ್ಗದ ಕೋಟೆ ವಿಶ್ವ ಪಾರಂಪರಿಕ ಪಟ್ಟಿಗೆ ಸೇರ್ಪಡೆಯಾಗಬೇಕು, ಅದೇ ರೀತಿ ಚಿತ್ರದುರ್ಗದಲ್ಲಿ ಮದಕರಿನಾಯಕ ಥೀಂ ಪಾರ್ಕ್ ನಿರ್ಮಾಣ ಮಾಡುವುದಾಗಿ ಬಿಜೆಪಿ. ಹಿರಿಯರೊಬ್ಬರು ಇಲ್ಲಿಗೆ ಬಂದಾಗ ಆಶ್ವಾಸನೆ ನೀಡಿದ್ದರು. ಇದುವರೆವಿಗೂ ಆಗಿಲ್ಲ. ಕೋಟೆಗೆ ನೇರ ದಾರಿಯಾದರೆ ಚಿತ್ರದುರ್ಗ ಕೂಡ ಹಂಪಿ ಮಾದರಿಯಲ್ಲಿ ಅಭಿವೃದ್ದಿಯಾಗಲಿದೆ ಇದಕ್ಕೆ ರಾಜಕಾರಣಿಗಳು ಪಕ್ಷ ಬೇಧ ಮರೆತು ಶ್ರಮಿಸಬೇಕೆಂದು ವಿನಂತಿಸಿದರು.

ಸ್ಪೈಟ್‌ಬಾಬಣ್ಣ, ತಿಪ್ಪೇಸ್ವಾಮಿ ಕಲ್ಲವ್ವನಾಗತಿಹಳ್ಳಿ, ಕವನ ಇವರುಗಳು ಮಾತನಾಡಿದರು. ಜಿಲ್ಲಾ ನಾಯಕ ಸಮಾಜದ ಅಧ್ಯಕ್ಷ ಹೆಚ್.ಜೆ.ಕೃಷ್ಣಮೂರ್ತಿ, ಮದಕರಿನಾಯಕ ವಿದ್ಯಾಸಂಸ್ಥೆಯ ಸಂದೀಪ್, ನಗರಸಭೆ ಸದಸ್ಯರುಗಳಾದ ದೀಪು, ಭಾಸ್ಕರ್, ನಸ್ರುಲ್ಲಾ, ಹರೀಶ್, ಮಾಜಿ ಸದಸ್ಯರುಗಳಾದ ರಾಘವೇಂದ್ರ, ಫಕೃದ್ದಿನ್, ಶಬ್ಬೀರ್‌ಭಾಷ, ನಗರಸಭೆ ಮಾಜಿ ಅಧ್ಯಕ್ಷ ಮಂಜುನಾಥಗೊಪ್ಪೆ, ಗೋನೂರು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಗುಂಡಮ್ಮ, ಸೂರಣ್ಣ, ಜಾನ್ಹವಿ ನಾಗರಾಜ್, ಕೆ.ಎಸ್.ಆರ್.ಟಿ.ಸಿ ಡಿಸಿ ಶ್ರೀನಿವಾಸ್, ರತ್ನಮ್ಮ ಇನ್ನು ಮೊದಲಾದವರು ವೇದಿಕೆಯಲ್ಲಿದ್ದರು. ಗಂಗಾಧರ್ ಮತ್ತು ತಂಡದವರು ಪ್ರಾರ್ಥಿಸಿದರು. ನಾಯಕ ಸಮಾಜದ ಮುಖಂಡ ಡಿ.ಗೋಪಾಲಸ್ವಾಮಿ ನಾಯಕ ಸ್ವಾಗತಿಸಿದರು.ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ರಾಜಾವೀರ ಮದಕರಿನಾಯಕನಿಗೆ ಕ್ರೇನ್ ಮೂಲಕ ದೊಡ್ಡ ಗಾತ್ರದ ಹೂಮಾಲೆ ಹಾಕಲಾಯಿತು. ನಂತರ ಎಲ್ಲಾ ಜಾತಿ ಧರ್ಮದವರು ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸಿದರು.



## ಪಾಳೆಯಗಾರರನ್ನು ನಿರ್ಲಕ್ಷಿಸಿದ್ದಕ್ಕೆ ವಿಜಯನಗರ ಸಾಮ್ರಾಜ್ಯ ಪಥನ: ಸಂಶೋಧಕ ಡಾ.ಮಹಂತೇಶ್

» ಚಿತ್ರದುರ್ಗ

ಮದಕರಿ ಎನ್ನುವ ಹೆಸರಿಗೆ ಶಕ್ತಿ ತುಂಬಿದ ರಾಜವೀರ ಮದಕರಿನಾಯಕ ಮಠಮಾನ್ಯಗಳನ್ನು ಬೆಳೆಸಿ ದಾನ ದತ್ತಿಗಳನ್ನು ಸಮರ್ಪಿಸಿದ್ದಾರೆಂದು ಇತಿಹಾಸ ಸಂಶೋಧಕ ಡಾ.ಎನ್.ಎಸ್.ಮಹಂತೇಶ್ ಸ್ಮರಿಸಿದರು.

ನಾಯಕ ಸಮಾಜದಿಂದ ತ.ರಾ.ಸು. ರಂಗಮಂದಿರದಲ್ಲಿ ಸೋಮವಾರ ನಡೆದ ರಾಜಾವೀರ ಮದಕರಿನಾಯಕನ 270 ನೇ ಪಟ್ಟಾಭಿಷೇಕ ಮಹೋತ್ಸವದಲ್ಲಿ ಉಪನ್ಯಾಸ ನೀಡಿದ ಅವರು ಚಿತ್ರದುರ್ಗಕ್ಕೆ ತನ್ನದೆ ಆದ ಇತಿಹಾಸ, ಸಾಂಸ್ಕೃತಿಕ ಪರಂಪರೆಯಿದೆ ಎಂದರೆ ಅದಕ್ಕೆ ಕೋಟೆ ಆಳಿದ ಪಾಳೆಯಗಾರರು ಕಾರಣ. ಕದಂಬರು, ಶಾತವಾಹನರು, ಚಾಲುಕ್ಯರು, ಹೊಯ್ಸಳರು, ರಾಷ್ಟ್ರಕೂಟರು ಇಲ್ಲಿ ಆಳ್ವಿಕೆ ನಡೆಸಿದ್ದಾರೆನ್ನುವುದಕ್ಕೆ ಶಾಸನಗಳು ಸಾಕ್ಷಿ. 20 ನೇ ಶತಮಾನದಲ್ಲಿ ಉತ್ತರಾರ್ಧ ಭಾಗದಲ್ಲಿ ಅನೇಕ ಸಂಶೋಧನೆಗಳು ನಡೆದಿವೆ. ಪ್ರಜಾಪ್ರಭುತ್ವ ಕಲ್ಯಾಣ ಬಂದಿದ್ದು, ಪಾಳೆಯಗಾರರ ಮನೆತನದಿಂದ. ವಿಜಯನಗರದ ಸಾಮ್ರಾಜ್ಯಕ್ಕೆ ಭದ್ರವಾದ ಅಡಿಪಾಯ ಹಾಕಿದವರು ಪಾಳೆಯಗಾರರು ಎನ್ನುವುದನ್ನುಮರೆಯುವಂತಿಲ್ಲಎಂದು ನೆನಪಿಸಿದರು.ಪಾಳೆಯಗಾರರನ್ನು ನಿರ್ಲಕ್ಷಿಸಿದ್ದಕ್ಕೆ ವಿಜಯನಗರ ಸಾಮ್ರಾಜ್ಯ ಪಥನವಾಯಿತು. 211 ವರ್ಷಗಳ ಕಾಲ ಹನ್ನೊಂದು ಅರಸರು ಚಿತ್ರದುರ್ಗದ ಕೋಟೆಯನ್ನು ಆಳಿದ್ದಾರೆ. ಹುಲ್ಲೂರು ಶ್ರೀನಿವಾಸ್ ಜೋಯಿಸ್, ಲಕ್ಷ್ಮಣ ತೆಲಗಾವಿ, ಸಾಹಿತಿ ಬಿ.ಎಲ್.ವೇಣು ಇವರುಗಳು ಚಿತ್ರದುರ್ಗದ ಇತಿಹಾಸವನ್ನು ಸರಣಿಯಾಗಿ ಬರೆದಿದ್ದಾರೆ. ತ.ರಾ.ಸು. ರವರು ದುರ್ಗಾಸ್ತಮಾನ ಕಾದಂಬರಿ ಬರೆಯದೆ ಹೋಗಿದ್ದರೆ ಇತಿಹಾಸ ಯಾರಿಗೂ ಗೊತ್ತಾಗುತ್ತಿರಲಿಲ್ಲ ಎಂದು ಹೇಳಿದರು.ಮತ್ತಿ ತಿಮ್ಮಣ್ಣನಾಯಕ, ಭರಮಣ್ಣನಾಯಕ, ಹಿರೇಮದಕರಿನಾಯಕ ಇವರುಗಳು ಪರಾಕ್ರಮಿಗಳಾಗಿದ್ದರು. ಹನ್ನೆರಡನೆ ವರ್ಷಕ್ಕೆ ಪಟ್ಟಕ್ಕೇರಿದ ರಾಜಾವೀರಮದಕರಿನಾಯಕನಲ್ಲಿ ಶೌರ್ಯ ಪರಾಕ್ರಮವನ್ನು ಬೆಳೆಸುವಲ್ಲಿ ಗಂಡೋಬವ್ವಳ ನಾಗತಿ ಪಾತ್ರವು ಅಡಗಿದೆ ಎನ್ನುವುದು ಬಹಳಷ್ಟು ಜನರಿಗೆ ಗೊತ್ತಿಲ್ಲ. ಹೈದರಾಲಿಗೆ ರಾಜತ್ವದ ಪರಿಕಲ್ಪನೆ ಅಧಿಕಾರ ತೋರಿಸಿಕೊಟ್ಟಿದ್ದು, ರಾಜಾವೀರಮದಕರಿನಾಯಕ, ಚಿತ್ರದುರ್ಗದ ಚರಿತ್ರೆಯಲ್ಲಿ ಧೀಮಂತ, ರೋಚಕವಾಗಿ ಆಳ್ವಿಕೆ ನಡೆಸಿದ ರಾಜಾವೀರ ಮದಕರಿನಾಯಕನ ಅಂತ್ಯ ಅತ್ಯಂತ ಭೀಕರವಾಗಿತ್ತು. ಏಷ್ಯಾ ಖಂಡದಲ್ಲಿಯೇ ಇಂತಹ ಭದ್ರವಾದ ಏಳುಸುತ್ತಿನ ಕೋಟೆ ಎಲ್ಲಿಯೂ ಇಲ್ಲ ಎಂದು ಫ್ರೆಂಚ್ ಅಧಿಕಾರಿ ಹೇಳಿದ್ದಾರೆ. ಚಿತ್ರದುರ್ಗದ ಬಗ್ಗೆ ಎಲ್ಲರೂ ಅಭಿಮಾನ ಮೂಡಿಸಿಕೊಂಡು ಇತಿಹಾಸವನ್ನು ಸಂರಕ್ಷಿಬೇಕಿದೆ ಎಂದು ತಿಳಿಸಿದರು.

## ಕೇಂದ್ರ ಸರ್ಕಾರ ಮದಕರಿ ಥೀಮ್ ಪಾರ್ಕ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಸಂಪೂರ್ಣ ಸಹಕಾರ: ರಘುಮೂರ್ತಿ



**ಚಿತ್ರದುರ್ಗ:** ಚಿತ್ರದುರ್ಗ ನಗರದಲ್ಲಿ ಕೇಂದ್ರ ಸರ್ಕಾರ ಮದಕರಿ ಥೀಮ್ ಪಾರ್ಕ ನಿರ್ಮಾಣ ಮಾಡುವುದಾದರೆ ಅದಕ್ಕೆ ಬೇಕಾದ ಸಹಕಾರವನ್ನು ರಾಜ್ಯ ಸರ್ಕಾರ ನೀಡಲಿದೆ ಎಂದು ಶಾಸಕರಾದ ರಘುಮೂರ್ತಿ ತಿಳಿಸಿದರು. ಚಿತ್ರದುರ್ಗ ನಗರದಲ್ಲಿ ಅವರನ್ನು ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2018ರ ಲೋಕಸಭಾ ಚುನಾವಣೆಯ ಸಮಯದಲ್ಲಿ ಬಿಜೆಪಿ ನಮ್ಮ ಪಕ್ಷ ಅಧಿಕಾರಕ್ಕೆ ಬಂದರೆ ಮದಕರಿ ಥೀಮ್ ಪಾರ್ಕವನ್ನು ಮಾಡುವ ಭರವಸೆಯನ್ನು ನೀಡಿತ್ತು, ಚಿತ್ರದುರ್ಗ ಜಿಲ್ಲಾ ಕೇಂದ್ರದಲ್ಲಿ ಮದಕರಿ ನಾಯಕ ವಂಶಸ್ಥರು ಪಾಳೇಗಾರರು ಇರುವ ಈ ಜಾಗದಲ್ಲಿ ಮದಕರಿನಾಯಕ ಥೀಮ್ ಪಾರ್ಕನ್ನು ಮಾಡುತ್ತೇವೆ ಎಂದಿದ್ದರು. ಅದನ್ನು ಮಾಡಬೇಕು, ಇದರ ನಿರ್ಮಾಣಕ್ಕೆ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಎಲ್ಲಾ ರೀತಿಯ ಸಹಕಾರವನ್ನು ನೀಡಲಿದೆ. ಕೇಂದ್ರದಲ್ಲಿ ಮಂಜೂರು ಮಾಡಿ ಸಹಕಾರ ನೀಡಿದರೆ ನಮ್ಮ ಸರ್ಕಾರವನ್ನು ಸಹಾ ನೀಡುತ್ತದೆ ಇದನ್ನು ಗಂಭೀರವಾಗಿ ತೆಗೆದುಕೊಳ್ಳಬೇಕಿದೆ. ಕೇಂದ್ರ ಸರ್ಕಾರ ಮಾಡಬೇಕು ಎಂದು ಒತ್ತಾಯಿಸಿದರು. ದಲಿತ ಮತ್ತು ಲಿಂಗಾಯತ ಸಮುದಾಯದವರು ಮುಖ್ಯಮಂತ್ರಿಯಾಗಬೇಕೆಂಬ ಹೇಳಿಕೆಯ ಬಗ್ಗೆ ಪಕ್ಷದ ಹೈಕಮಾಂಡ ನಿಗಾವನ್ನು ಇರಿಸಿದೆ. ಇದರ ಬಗ್ಗೆ ಗಮನವನ್ನು ಹರಿಸುತ್ತಿದೆ ಇಂದಿನ ದಿನಮಾನದಲ್ಲಿ ಇಂತಹ ಹೇಳಿಕೆ ಬರುವುದು ಸಾಮಾನ್ಯವಾಗಿದೆ ಇಂತಹ ಹೇಳಿಕೆಯ ಬಗ್ಗೆಯೂ ಸಹಾ ಪಕ್ಷದ ಮುಖಂಡರು ಗಮನ ಹರಿಸುತ್ತಿದ್ದಾರೆ ಮುಂದಿನ ದಿನದಲ್ಲಿ ಇದರ ಬಗ್ಗೆ ತೀರ್ಮಾನ ತೆಗೆದುಕೊಳ್ಳಲಿದ್ದಾರೆ ಎಂದು ಶಾಸಕ ರಘುಮೂರ್ತಿ ತಿಳಿಸಿದರು.

**ಫಾಸ್ಟ್ ನ್ಯೂಸ್**

### ಗ್ರಾಮೀಣ ಭಾಗಗಳಲ್ಲಿ ಮಾಯವಾದ ಸ್ವಚ್ಛತೆ : ತಾಲ್ಲೂಕು ಪಂಚಾಯಿತಿ ಆಡಳಿತಕ್ಕೆ ಬಾರುಕೋಲು ಚಳುವಳಿ ಎಚ್ಚರಿಕೆ

» ಚಳ್ಳಕೆರೆ

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಪ್ರಗತಿಪರ ಸಂಘಟನೆಗಳ ನೇತೃತ್ವದಲ್ಲಿ ತಾಲ್ಲೂಕು ಪಂಚಾಯಿತಿ ಕಚೇರಿ ಮುಂದೆ ಜುಲೈ5ರ ಶುಕ್ರವಾರ ಬೆಳಗ್ಗೆ 11 ಗಂಟೆಗೆ ಬಾರುಕೋಲು ಚಳುವಳಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಉಪಾಧ್ಯಕ್ಷ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ತಿಳಿಸಿದರು. ಅವರು, ಪತ್ರಿಕೆಯೊಂದಿಗೆ ಮಾತನಾಡಿ, ತಾಲ್ಲೂಕಿನ 40 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸ್ವಚ್ಛತೆ ಮಾಯವಾಗಿದೆ. ಪ್ರತಿಗ್ರಾಮಗಳಲ್ಲೂ ಕಸ, ಕಡ್ಡಿ ದುರ್ವಾಸನೆಯಿಂದ ಕೂಡಿದೆ. ವಿಶೇಷವಾಗಿ ಗ್ರಾಮ ಪಂಚಾಯಿತಿ ಆಡಳಿತ, ಚುನಾಯಿತ ಸದಸ್ಯ, ಪಿಡಿಒ ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗ ಸ್ವಚ್ಛತೆಯ ಬಗ್ಗೆ ಗಮನಹರಿಸುತ್ತಿಲ್ಲ, ಆದ್ದರಿಂದ ತಾಲ್ಲೂಕು ಪಂಚಾಯಿತಿ ಆಡಳಿತ ನಿದ್ರೆಗೆ ಜಾರಿದ್ದು, ಬಾರುಕೋಲು ಚಳುವಳಿ ಮೂಲಕ ಎಚ್ಚರಿಸಲಾಗುವುದು ಎಂದು ಅವರು ತಿಳಿಸಿದ್ದಾರೆ. ಗ್ರಾಮೀಣ ಭಾಗಗಳ ಮನೆಯ ಮುಂದೆ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು, ಗ್ರಾಮದ ಚರಂಡಿ, ಇನ್ನಿತರೆ ಕಡೆ ಬಿಚ್ಲಿಂಗ್ ಪೌಂಡರ್ ಸಿಂಪಡಿಸಿ ಸ್ವಚ್ಛಗೊಳಿಸಬೇಕು, ನೀರಿನ ಟ್ಯಾಂಕ್, ತೊಟ್ಟಿ, ಕುಡಿಯುವ ನೀರಿನ ಪೈಪ್ ಸ್ವಚ್ಛಗೊಳ್ಳಬೇಕು, ಗ್ರಾಮೀಣ ಭಾಗಗಳ ಹಗಲು ವೇಳೆ ವಿದ್ಯುತ್ ದೀಪ ಉರಿದು ಸಾವಿರಾರು ರೂಪಾಯಿ ಬಿಲ್ ಬರುವುದನ್ನು ತಡೆಯಬೇಕು ಮುಂತಾದ ಆರು ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಹೋರಾಟ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಜಿಲ್ಲೆಯ ಗೌರವಾಧ್ಯಕ್ಷ ಬಾಗೇನಾಳ್ ಕೊಟ್ರಬಸಪ್ಪ, ಓ.ಟಿ.ತಿಪ್ಪೇಸ್ವಾಮಿ, ಮಿಟ್ಲಕಟ್ಟೆ ಕೆ.ಮಲ್ಲೇಶಪ್ಪ, ದಾನಸೂರನಾಯಕ, ಪೃಥ್ವಿರಾಜ್, ನಾಗರಾಜು, ಮರ್ಲಹಳ್ಳಿನಾಗೇಶ್, ಜಿ.ಪಿ.ಹನುಮಂತರೆಡ್ಡಿ ಮುಂತಾದವರು ಬಾರುಕೋಲು ಚಳುವಳಿಯಲ್ಲಿ ಭಾಗವಹಿಸುವರು ಎಂದು ತಿಳಿಸಿದ್ದಾರೆ.

### ಅಂಗನವಾಡಿ ಶಿಕ್ಷಕಿಯರಿಗೆ ಪಿಯುಸಿ ಮತ್ತು ಬಿಎ ಪರೀಕ್ಷೆ ಕಟ್ಟಲು ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕರಾಜ್ಯದಲ್ಲಿರುವಅಂಗನವಾಡಿಗಳುಮತ್ತು ಶಿಶು ವಿಹಾರಗಳು ಮತ್ತು ಬಾಲಮಂದಿರಗಳಲ್ಲಿ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿರುವ ಎಸ್‌ಎಸ್‌ಎಲ್‌ಸಿ ಪಾಸಾದ ಅಭ್ಯರ್ಥಿಗಳಿಗೆ ದೂರ ಶಿಕ್ಷಣದಲ್ಲಿ ನೇರವಾಗಿ ದ್ವಿತೀಯ ಪಿಯುಸಿ ಪರೀಕ್ಷೆ ಕಟ್ಟಲು ಮತ್ತು ದ್ವಿತೀಯ ಪಿಯುಸಿ ಪಾಸಾದವರಿಗೆ ಬಿ.ಎ. , ಬಿ.ಕಾಂ., ಬಿ.ಎಸ್ಸಿ, ಪರೀಕ್ಷೆಗಳನ್ನು ಬರೆಯಲು ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಪಿಯುಸಿ ಮತ್ತು ಪದವಿ ಪರೀಕ್ಷೆಗಳನ್ನು ಬರೆಯಲು ಆಸಕ್ತ ಶಿಕ್ಷಕಿಯರು ಕನಕ ಕರೆಸ್ಪಾಂಡೆನ್ಸ್ ಕಾಲೇಜು, 2ನೇ ಮಹಡಿ, ಕುರುಬರ ಹಾಸ್ಟೆಲ್ ಕಾಂಪ್ಲೆಕ್ಸ್, ಜಯದೇವ ಸರ್ಕಲ್ ಹತ್ತಿರ, ದಾವಣಗೆರೆ ಇಲ್ಲಿನ ವಿಳಾಸಕ್ಕೆ ಅಥವಾ ಮೊ. 7022936433, 9886678178 ಸಂಪರ್ಕಿಸಿ ಮಾಹಿತಿ ಪಡೆಯಲು ತಿಳಿಸಲಾಗಿದೆ.

### ಲೋಕಾದಾಲತ್: ಪೂರ್ವಭಾವಿ ಸಭೆ

» ದಾವಣಗೆರೆ

ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದಂತೆ ಜುಲೈ 13 ರಂದು ರಾಷ್ಟ್ರೀಯ ಲೋಕಾದಾಲತ್ತು ಹಮ್ಮಿಕೊಳ್ಳಲಾಗಿದ್ದು. ಲೋಕ ಅದಾಲತ್ತಿನ ಪೂರ್ವಭಾವಿಯಾಗಿ ಜೂ. 29 ರಂದು ಹರಿಹರದಲ್ಲಿ ಸಭೆ ಮತ್ತು ಸಮಾಲೋಚನಾ ಸಭೆ ಆಯೋಜಿಸಲಾಗಿತ್ತು.

## ಫಾಸ್ಟ್ ನ್ಯೂಸ್

### ಮೋಟಾರ್ ರಿವೈಂಡಿಂಗ್ ತರಬೇತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಶ್ರೀಧರ್ಮಸ್ಥಳಮಂಜುನಾಥೇಶ್ವರಶಿಕ್ಷಣಟ್ರಸ್ಟ್ಮತ್ತು ಕೆನರಾ ಬ್ಯಾಂಕ್ ಸಹಯೋಗದಲ್ಲಿ ನಡೆಸುತ್ತಿರುವ ರುಡ್ ಸೆಟ್ ಸಂಸ್ಥೆಯಿಂದ ಜುಲೈ 10 ರಿಂದ 30 ದಿನಗಳ ಮೋಟಾರ್ ರಿವೈಂಡಿಂಗ್ ಉಚಿತ ತರಬೇತಿ ಆಯೋಜಿಸಲಾಗಿದ್ದು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕರು ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಆಧಾರ್ ಕಾರ್ಡ್ ಹಾಗೂ ಬಿಪಿಎಲ್ ಕಾರ್ಡ್ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ವಸತಿಯುತವಾಗಿದ್ದು, ತರಬೇತಿ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು. ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಜುಲೈ 8 ರಂದು ಕೊನೆಯ ದಿನವಾಗಿದೆ.ಹೆಚ್ಚಿನ ಮಾಹಿತಿಗಾಗಿ ರುಡ್ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9241482541, 8884554510, 9113880324 ಗೆ ಸಂಪರ್ಕಿಸಬಹುದು.

### ಗ್ರಾಮ ಪಂಚಾಯತಿ ಕಾರ್ಯದರ್ಶಿ ಉಪನೋಂದಣಾಧಿಕಾರಿ

» ದಾವಣಗೆರೆ

ಜನನ, ಮರಣ ನೋಂದಣಿಗೆ ಸರ್ಕಾರದ ಆದೇಶದಂತೆ ಗ್ರಾಮ ಪಂಚಾಯತಿ ಕಾರ್ಯದರ್ಶಿಯನ್ನು ಜನನ, ಮರಣ ಉಪನೋಂದಣಾಧಿಕಾರಿಗಳಾಗಿ ನೇಮಕ ಮಾಡಿ ಆದೇಶಿಸಿದ್ದು 2024 ಜುಲೈ 1 ರಿಂದ ಗ್ರಾಮೀಣ ಪ್ರದೇಶದಲ್ಲಿ ಜನನ, ಮರಣಗಳ ನೋಂದಣಿಯನ್ನು ಗ್ರಾಮ ಪಂಚಾಯತಿಯಲ್ಲಿ ನೋಂದಣಿ ಮಾಡಲಾಗುತ್ತಿದ್ದು ಜನನ, ಮರಣ ಘಟನೆಗಳು ಘಟಿಸಿದ 21 ದಿನಗಳೊಳಗಾಗಿ ನೋಂದಾಯಿಸಿ ಉಚಿತವಾಗಿ ಪ್ರಮಾಣ ಪತ್ರ ಪಡೆಯಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ತಿಳಿಸಿದ್ದಾರೆ.

### ಪ್ರಥಮ ಆವೃತ್ತಿ ಕೃತಿಗಳಿಗೆ ಬಹುಮಾನ ಆಯ್ಕೆ

» ದಾವಣಗೆರೆ

ಕರ್ನಾಟಕ ಜಾನಪದ ಅಕಾಡೆಮಿಯ 2022 ಮತ್ತು 2023 ನೇ ಸಾಲಿನ ಜನವರಿಯಿಂದ ಡಿಸೆಂಬರ್ನ ರವರೆಗೆ ಪ್ರಥಮ ಆವೃತ್ತಿಯಲ್ಲಿ ಮುದ್ರಣಗೊಂಡಿರುವ (ತಾಂತ್ರಿಕ ಹಾಗೂ ಪೂರ್ವಭಾವಿ ಪುಟಗಳನ್ನು ಹೊರತು ಪಡಿಸಿ) ಕನಿಷ್ಠ 150 ಪುಟಗಳಿಗೂ ಮೇಲ್ಪಟ್ಟಿರುವಂತಹ ಜನಪದ ಗದ್ಯ, ಜನಪದ ಪದ್ಯ, ಜನಪದ ವಿಚಾರ–ವಿಮರ್ಶೆ– ಸಂಶೋಧನೆ, ಹಾಗೂ ಜನಪದ ಸಂಕೀರ್ಣ ಪ್ರಕಾರಗಳ ಅತ್ಯುತ್ತಮ ಜಾನಪದ ಕೃತಿಗಳಿಗೆ ಬಹುಮಾನ ನೀಡಲು ಆಹ್ವಾನಿಸಲಾಗಿದೆ. ಲೇಖಕರು, ಪ್ರಕಾಶಕರು, ಸಂಪಾದಕರು 4 ಕೃತಿಗಳನ್ನು ದ್ವಿಪ್ರತಿ ಬಿಲ್ಲಿನೊಂದಿಗೆ ಕರ್ನಾಟಕ ರಿಜಿಸ್ಟ್ರಾರ್, ಜಾನಪದ ಅಕಾಡೆಮಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು–560002 ಇವರಿಗೆ ಜುಲೈ ಅಂತ್ಯದೊಳಗಾಗಿ ಕಳುಹಿಸಲು ತಿಳಿಸಲಾಗಿದೆ.

### ಕಾನೂನು ಪದವೀಧರರಿಗೆ 4 ವರ್ಷದ ತರಬೇತಿಗಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿಗೆ ಅಲ್ಪಸಂಖ್ಯಾತರ ವರ್ಗಗಳಿಗೆ ಸೇರಿದ ಕಾನೂನು ಪದವೀಧರರಿಗೆ ನ್ಯಾಯಾಂಗ ಆಡಳಿತದಲ್ಲಿ 4 ವರ್ಷದ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮತೀಯ ಅಲ್ಪಸಂಖ್ಯಾತರ ವರ್ಗಗಳಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಪಾರ್ಸಿ, ಸಿಖ್, ಆಂಗ್ಲೋಇಂಡಿಯನ್ ಗೆ ಸೇರಿದವರು ಅರ್ಜಿ ಸಲ್ಲಿಸಬಹುದು. ಜುಲೈ 20 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ತರಬೇತಿಯ ಅವಧಿ 4 ವರ್ಷಗಳಾಗಿದ್ದು, ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಹೆಯಾನ ರೂ.5000 ತರಬೇತಿ ಭತ್ಯೆ ನೀಡಲಾಗುವುದು. ಜಿಲ್ಲೆಯಿಂದ 05 ಅಭ್ಯರ್ಥಿಗಳನ್ನು ಮಾತ್ರ ಆಯ್ಕೆ ಮಾಡಲಾಗುತ್ತದೆ, ಹೆಚ್ಚಿನ ಮಾಹಿತಿಗೆ ದೂರವಾಣಿ 08192–250022 ಸಂಪರ್ಕಿಸಲು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ತಿಳಿಸಿದ್ದಾರೆ.

### ಡಾ.ಫಕ್ಕೀರಪ್ಪ ಗುರುಬಸಪ್ಪ ಹಳಕಟ್ಟಿ ಜನ್ಮದಿನ-ವಚನ ಸಾಹಿತ್ಯ ದಿನಾಚರಣೆ

» ದಾವಣಗೆರೆ

ಜಿಲ್ಲಾಡಳಿತ ವತಿಯಿಂದ ಜುಲೈ 2 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಡಾ.ಫಕ್ಕೀರಪ್ಪ ಗುರುಬಸಪ್ಪ ಹಳಕಟ್ಟಿಯವರ ಜನ್ಮದಿನ–ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆಯನ್ನು ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ರವಿಚಂದ್ರ ತಿಳಿಸಿದ್ದಾರೆ.

# ಜೀವನಮಟ್ಟ ಸುಧಾರಣೆಗೆ ದತ್ತಾಂಶ ಬಹಳ ಮುಖ್ಯ ಪಾತ್ರ ವಹಿಸಲಿದೆ: ಚನ್ನಬಸಪ್ಪ

» ಚಿತ್ರದುರ್ಗ

ಅಂಕಿ ಸಂಖ್ಯೆಯ ರೂಪದ ಉತ್ತಮ ದತ್ತಾಂಶ ಎಲ್ಲರಿಗೂ ಉತ್ತಮ ಜೀವನಕ್ಕೆ ಕಾರಣವಾಗಲಿದೆ. ಜೀವನಮಟ್ಟ ಸುಧಾರಣೆಗೆ ದತ್ತಾಂಶ ಬಹಳ ಮುಖ್ಯ ಪಾತ್ರ ವಹಿಸಲಿದೆ ಎಂದು ಚಿತ್ರದುರ್ಗ ನಗರದ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಚನ್ನಬಸಪ್ಪ ಹೇಳಿದರು.




ನಗರದ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯಲ್ಲಿ ಶನಿವಾರ ಸಾಂಖ್ಯಿಕ ತಜ್ಞ ಪ್ರೊ.ಪಿ.ಸಿ.ಮಹಲನೋಬಿಸ್ ಅವರ ಜನ್ಮ ದಿನದ ಅಂಗವಾಗಿ ಸಾಂಖ್ಯಿಕ ದಿನಾಚರಣೆ ಕಾರ್ಯಕ್ರಮದಲ್ಲಿ "ನಿರ್ಧಾರ ಕೈಗೊಳ್ಳುವಲ್ಲಿ ದತ್ತಾಂಶದ ಉಪಯೋಗ" ವಿಷಯದ ಕುರಿತು ಅವರು ಉಪನ್ಯಾಸ ನೀಡಿದರು.

ದತ್ತಾಂಶ (ಡೇಟಾ) ಎಂಬುವುದು ದೇಶದ ಆರ್ಥಿಕತೆಯ ಶಕ್ತಿ ಇದ್ದಂತೆ. ಅಂಕಿ–ಸಂಖ್ಯೆಗಳು ದೇಶದ ನೀತಿಯನ್ನು ರೂಪಿಸುವಲ್ಲಿ ಸಹಕಾರಿಯಾಗುತ್ತವೆ ಎಂದರು. ಸಮಾಜ ಬದಲಾಗಬೇಕಾದರೆ ಆರ್ಥಿಕತೆ ಬೇಕು. ಆರ್ಥಿಕಾಭಿವೃದ್ಧಿಗೆ ಸಂಬಂಧಪಟ್ಟಂತೆ ಯೋಜನೆಗಳು ಅಗತ್ಯ. ಯೋಜನೆನಂತರನೀತಿಜಾರಿಯಾಗಬೇಕು. ಯೋಜನೆ, ನೀತಿ ಜಾರಿಯಾಗಬೇಕಾದರೆ ಅಂಕಿ ಸಂಖ್ಯೆಗಳ ದತ್ತಾಂಶದ ಆಧಾರದ ಮೇಲೆ ಯೋಜನೆ ರೂಪಿತವಾಗಲಿದೆ. ಇದರಿಂದ ದೇಶ ಅಭಿವೃದ್ಧಿಯಲ್ಲಿ ಮುನ್ನಡೆ ಸಾಧಿಸಲು ಅನುಕೂಲವಾಗಲಿದೆ ಎಂದು ಅಭಿಪ್ರಾಯಪಟ್ಟರು.ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎನ್.ರವಿಕುಮಾರ್ ಮಾತನಾಡಿ, ಅಂಕಿ–ಅಂಶಗಳ ಬಳಕೆ ಮತ್ತಷ್ಟು ಜನಪ್ರಿಯಗಳಿಸಲು, ಈ ಕುರಿತು ಜನರಲ್ಲಿಜಾಗೃತಿಮೂಡಿಸಲು,ಅಂಕಿ–ಅಂಶ ದಿನಾಚರಣೆ ಆಚರಿಸಲಾಗುತ್ತಿದೆ. ಸಾಂಖ್ಯಿಕ ತಜ್ಞರಾದ ಪ್ರೊ.ಪಿ.ಸಿ.ಮಹಲನೋಬಿಸ್ ಅವರು ಗಣಿತ ಶಾಸ್ತ್ರಕ್ಕೆ ಹಾಗೂ ಸಾಂಖ್ಯಿಕ ಇಲಾಖೆಗೆ ಸಾಕಷ್ಟು ಕೊಡುಗೆ ನೀಡಿದ್ದಾರೆ ಎಂದರು.

ದೇಶದ ಅಭಿವೃದ್ಧಿಗೆ, ನೀತಿ ನಿರೂಪಣೆಗೆ ಅಂಕಿ–ಅಂಶಗಳ ಪಾತ್ರ ಮತ್ತು ಪ್ರಾಮುಖ್ಯತೆ ಕುರಿತು ಯುವ ಪೀಳಿಗೆಗೆ ವಿಶೇಷವಾಗಿ ಜಾಗೃತಿ ಮೂಡಿಸಲಾಗುವುದು ಎಂದು ಹೇಳಿದರು.ಭದ್ರ ಮೇಲ್ದಂಡೆ ಯೋಜನೆಯ ಉಪನಿರ್ದೇಶಕಿ ಕುಮುದಾ ಮಾತನಾಡಿ, ಜೀವನದಲ್ಲಿ ದತ್ತಾಂಶ ಬಹಳ ಮಹತ್ವವನ್ನು ಪಡೆದಿದೆ. ದತ್ತಾಂಶದಿಂದ ಯೋಜನೆ ರೂಪಿಸಿಕೊಳ್ಳಲು ಸಹಾಯಕವಾಗಲಿದೆ ಎಂದರು.ದತ್ತಾಂಶವನ್ನು ಸಂಗ್ರಹ ಮಾಡಬೇಕಾದರೆ ಬಹಳ ಎಚ್ಚರಿಕೆಯಿಂದ ಹಾಗೂ ಸೂಕ್ಷ್ಮವಾಗಿ ಕಾರ್ಯನಿರ್ವಹಿಸಬೇಕು.ದತ್ತಾಂಶಸಂಗ್ರಹ ಯಾವ ಉದ್ದೇಶಕ್ಕಾಗಿ ಮಾಡಲಾಗುತ್ತಿದೆ, ಇದರಿಂದ ಯಾವ ಉಪಯೋಗ ಆಗಲಿದೆ ಎಂಬುದನ್ನು ಗಮನಹರಿಸಿ, ಬಹಳ ನಿಖರವಾಗಿ ದತ್ತಾಂಶ ಸಂಗ್ರಹ ಕಾರ್ಯ ಮಾಡಬೇಕು ಎಂದು ಸಲಹೆ ನೀಡಿದರು.ಕಾರ್ಯಕ್ರಮದಲ್ಲಿ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಾಂಖ್ಯಿಕ ತಜ್ಞರಾದ ಪ್ರೊ.ಪಿ.ಸಿ.ಮಹಾಲನೋಬಿಸ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.ಈ ಸಂದರ್ಭದಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯ ಸಹಾಯಕ ನಿರ್ದೇಶಕರಾದ ಶಶಿರೇಖಾ, ಯಾಸೀನ್ ಜಮೇದಾರ್, ಪಶು ಸಂಗೋಪನೆ ಇಲಾಖೆಯ ನೂರ್‌ಜಾನ್, ಜಿಲ್ಲಾಧಿಕಾರಿಗಳ ಕಚೇರಿಯ ಜ್ಯೋತಿ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯ ವ್ಯವಸ್ಥಾಪಕಿ ಗೀತಾ, ಸಹಾಯಕ ಸಾಂಖ್ಯಿಕ ಅಧಿಕಾರಿಗಳಾದ ಅಶ್ವತ್ಥಾಮ, ವೀಣಾ, ಹೆಚ್.ಚಂದ್ರಮ್ಮ, ರೂಪಾದೇವಿ, ವೇವಣ್ಣ, ಮಂಜುನಾಥ್, ರವಿ ಹಾಗೂ ತಾಲ್ಲೂಕಿನ ಎಲ್ಲಾ ಸಾಂಖ್ಯಿಕ ನಿರೀಕ್ಷಕರು, ಗಣತಿದಾರರು ಇದ್ದರು.

## ಲ್ಯಾಂಡ್ ಬೀಟ್‌ನಲ್ಲಿ ದಾವಣಗೆರೆ ಪ್ರಥಮ

» ದಾವಣಗೆರೆ


ದಾವಣಗೆರೆ ಜಿಲ್ಲೆ ಪಹಣಿಗೆ ಆಧಾರ್ ಲಿಂಕ್ ಮತ್ತು ಸರ್ಕಾರಿ ಲ್ಯಾಂಡ್‌ಬೀಟ್ ಪ್ರಗತಿಯಲ್ಲಿ ರಾಜ್ಯದಲ್ಲಿ ಪ್ರಥಮ ಸ್ಥಾನದಲ್ಲಿದ್ದು ತಾಂತ್ರಿಕತೆಯ ನೈಪುಣ್ಯತೆಯನ್ನು ಕಂದಾಯ ಇಲಾಖೆ ಸಿಬ್ಬಂದಿಗಳು ಹೆಚ್ಚಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದರು.



ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳೊಂದಿಗೆ ಆಚರಿಸಲಾದ ಕಂದಾಯ ದಿನಾಚರಣೆಯಲ್ಲಿ ಮಾತನಾಡಿದರು. ರೈತರ ಜಮೀನಿನ ಪಹಣಿಗೆ ಆಧಾರ್ ಜೋಡಣೆ ಮಾಡುವ ಕೆಲಸ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ನಡೆಯುತ್ತಿದ್ದು ಸರ್ಕಾರಿ ಜಮೀನುಗಳ ಒತ್ತುವರಿಯಾಗದಂತೆ ತಡೆಗಟ್ಟಲು ಲ್ಯಾಂಡ್‌ಬೀಟ್ ತಂತ್ರಾಂಶವನ್ನು ಅಭಿವೃದ್ದಿಪಡಿಸಲಾಗಿದ್ದು ಇವೆರಡರಲ್ಲಿಯೂ ಜಿಲ್ಲೆ ಮೊದಲ ಸ್ಥಾನದಲ್ಲಿದೆ.ಇತರೆ ಇಲಾಖೆಗಳಿಗಿಂತಲೂ ಕಂದಾಯ ಇಲಾಖೆಯ ಜವಾಬ್ದಾರಿ ಹೆಚ್ಚಿದೆ, ರೈತರು, ಸಾರ್ವಜನಿಕರಿಗೆ ಹೆಚ್ಚಿನ ಸೇವೆ ಹಾಗೂ ಸೌಲಭ್ಯಗಳನ್ನು ಕಲ್ಪಿಸುವ ಇಲಾಖೆಯಾಗಿದೆ. ಕಂದಾಯ ಇಲಾಖೆ ಆಧುನಿಕತೆಯತ್ತಾ ದಾಪುಗಾಲಿಟ್ಟಿದ್ದು ಡಿಜಿಟಲೀಕರಣವಾಗುತ್ತಿದೆ. ಆದ್ದರಿಂದ ಕಂದಾಯ ಇಲಾಖೆಯಲ್ಲಿನ ಎಲ್ಲಾ ಸಿಬ್ಬಂದಿಗಳು ತಾಂತ್ರಿಕ ನೈಪುಣ್ಯತೆಯನ್ನು ಹೆಚ್ಚಿಸಿಕೊಳ್ಳುವ ಮೂಲಕ ಸಾರ್ವಜನಿಕರ ಸೇವೆ ಮಾಡಲು ಮುಂದಾಗಬೇಕಾಗಿದೆ.

ಹೊಸ ಹೊಸ ತಂತ್ರಜ್ಞಾನಗಳನ್ನು ಇಲಾಖೆ ಅಳವಡಿಸಿಕೊಳ್ಳುವ ಮೂಲಕ ಜನರಿಗೆ ಸುಲಭವಾಗಿ ಸೇವೆ ನೀಡುವಲ್ಲಿ ಸಾಕಷ್ಟು ಬದಲಾವಣೆಯಾಗುತ್ತಿದೆ ಎಂದರು.ಈ ವೇಳೆ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಉಪವಿಭಾಗಾಧಿಕಾರಿ ದುರ್ಗಶ್ರೀ, ಅಭಿಷೇಕ್ ಹಾಗೂ ತಹಶೀಲ್ದಾರರು, ಸಿಬ್ಬಂದಿಯವರು ಉಪಸ್ಥಿತರಿದ್ದರು.

## ವೈದ್ಯರನ್ನು ಅಭಿನಂದಿಸಿದ ಪ್ರಗತಿಪರ ರೈತ




» ಚಳ್ಳಕೆರೆ

ವೈದ್ಯಕೀಯಕ್ಷೇತ್ರದದಂತಕಥೆಡಾ.ಬಿ.ಎಚ್.ರಾಯಿರವರಹುಟ್ಟುಹಬ್ಬವನ್ನು ವೈದ್ಯರ ದಿನಾಚರಣೆಯಾಗಿ ಆಚರಿಸುತ್ತಿದ್ದು, ವೈದ್ಯರ ದಿನಾಚರಣೆ ಹಿನ್ನೆಲೆಯಲ್ಲಿ ವೈದ್ಯರಿಗೆ ಆತ್ಮೀಯವಾಗಿ ಅಭಿನಂದಿಸಲಾಯಿತು ಎಂದು ಪ್ರಗತಿಪರ ರೈತ ಡಾ.ಆರ್.ಎ.ದಯಾನಂದಮೂರ್ತಿ ತಿಳಿಸಿದರು.

ಅವರು, ನಗರದ ಖಾಸಗಿ ಕ್ಲಿನಿಕ್‌ನಲ್ಲಿ ಹೃದಯರೋಗ ತಜ್ಞ ಡಾ.ಅಮಿತ್‌ಗುಪ್ತ, ಪಶುಸಂಗೋಪನೆ ಇಲಾಖೆ ಸಹಾಯಕ ನಿರ್ದೇಶಕ ಡಾ.ರೇವಣ್ಣ, ಉಮಾದೇವಿ, ನೇತ್ರತಜ್ಞ ದೀಪಕ್, ಸ್ಟಾಫ್‌ನರ್ಸ್ ಚೈತ್ರರವರನ್ನು ಸನ್ಮಾನಿಸಿ ಮಾತನಾಡಿದರು.ಈ ಸಂದರ್ಭದಲ್ಲಿ ಸಂಜೀವಿನಿ ಲ್ಯಾಬ್‌ನ ಎಂ.ಎನ್.ಮೃತ್ಯುಂಜಯ, ಪಿಲ್ಲಹಳ್ಳಿಚಿತ್ರಲಿಂಗಪ್ಪ, ಚನ್ನಿಗರಾಯ ಮುಂತಾದವರು ಉಪಸ್ಥಿತರಿದ್ದರು.

## ವಿಶ್ವ ಹಿಂದೂ ಪರಿಷತ್-ಬಜರಂಗದಳದಿಂದ ಹೊಸದುರ್ಗ ಪ್ರಖಂಡ ಕಾರ್ಯಕ್ರಮ

» ಹೊಸದುರ್ಗ

ದೇಶಾದ್ಯಂತ ಬಜರಂಗದಳದ ಸೇವಾ ಸಪ್ತಾಹ ನಿಮಿತ್ತ ಈ ಬಾರಿ ಉಚಿತ ಆರೋಗ್ಯ ಶಿಬಿರಗಳನ್ನು ಮಾಡಲಾಗುತ್ತಿದ್ದು, ಹೊಸದುರ್ಗ ಪ್ರಖಂಡದಿಂದ ಭಾನುವಾರ ಬೆಳಿಗ್ಗೆ ಪಟ್ಟಣದ ಮುಖ್ಯ ರಸ್ತೆಯ ಕೆನರಾ ಬ್ಯಾಂಕ್ ಮುಂಭಾಗದಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಮಾಡಲಾಯಿತು.

ಕಾರ್ಯಕ್ರಮದ ಉದ್ಘಾಟನೆಯನ್ನು ವಿಶ್ವ ಹಿಂದೂ ಪರಿಷತ್ತಿನ ಅಧ್ಯಕ್ಷ ಶ್ರೀನಿವಾಸ್ ಮೂರ್ತಿ, ಕಾರ್ಯದರ್ಶಿ ಕುಮಾರಣ್ಣ, ಬಜರಂಗದಳ ಸಂಯೋಜಕ ಸಿದ್ದೇಶ್, ಸಮಾಜ ಸೇವಕರಾದ ಸದ್ಗುರು ಪ್ರದೀಪ್ ಮತ್ತು ತುಂಬಿನಕೆರೆ ಬಸವರಾಜ್ ಸೇರಿದಂತೆ ಇತರರು ಭಾರತ ಮಾತೆಯ ಫೋಟೋಗೇ ಪುಷ್ಪರ್ಚನೆ ಮಾಡುವ ಮೂಲಕ ಉದ್ಘಾಟಿಸಿದರು.

ಈ ತಪಾಸಣೆಯ ಪ್ರಮುಖರಾದ ಡಾ.ಬ್ರಹ್ಮರಾಜ್ ನೇತೃತ್ವದ ತಂಡ ಉಪಸ್ಥಿತಿ ಇದ್ದರು. ಈ ಆರೋಗ್ಯ ತಪಾಸಣೆಯಲ್ಲಿ 70ಕ್ಕೂ ಹೆಚ್ಚು ರೋಗಿಗಳಿಗೆ ತಪಾಸಣೆ ಮಾಡಲಾಯಿತು. ಈ ಆರೋಗ್ಯ ತಪಾಸಣೆಯಲ್ಲಿ ಸಾಮಾನ್ಯ ಚಿಕಿತ್ಸೆ, ಹೃದಯ ಸಂಬಂಧಿತ ಚಿಕಿತ್ಸೆ ಮತ್ತು ಚರ್ಮರೋಗ ಚಿಕಿತ್ಸೆ ನಡೆಸಲಾಯಿತು.

ಈ ಕಾರ್ಯಕ್ರಮದಲ್ಲಿ ತಾಲ್ಲೂಕು ಭಾಜಾಪ ಪ್ರಧಾನ ಕಾರ್ಯದರ್ಶಿ ಜಗದೀಶ್ ರಾಮಯ್ಯ, ರವಿಕಿರಣ್ ಪಾಟೀಲ್, ಪಂಪ, ಚೇತನ್ ಪೀಲಾಪುರ ರವಿಯಣ್ಣ.ಕಣ್ವ ಮನು, ಹೊನ್ನೇನಹಳ್ಳಿ ಶ್ರೀನಿವಾಸ್,ವಿದ್ಯಾರ್ಥಿ ಪ್ರಮುಖ್ ಗಜೇಂದ್ರ ಉಷಾ,ರಾಧ, ಹೆಚ್.ಓ. ಉಪಸ್ಥಿತಿ ಇದ್ದರು.



**ಪ್ರಮುಖ ಸುದ್ದಿ**

# ಸರ್ಕಾರಿ ಶಾಲಾ ಆವರಣದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣದಿಂದ ಇಲಾಖೆಗಳಿಗೆ ಅನುಕೂಲ: ಡಿಸಿ

» ದಾವಣಗೆರೆ

ಸರ್ಕಾರಿಶಾಲಾಆವರಣದಲ್ಲಿಅಂಗನವಾಡಿ ಕಟ್ಟಡಗಳನ್ನು ನಿರ್ಮಿಸುವುದರಿಂದ ಎರಡು ಇಲಾಖೆಗೂ ಅನುಕೂಲವಾಗಲಿದೆ ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ. ತಿಳಿಸಿದರು.



ಅವರು ಶನಿವಾರ (29) ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳು, ಮಹಾನಗರ ಪಾಲಿಕೆ ವತಿಯಿಯಿಂದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣ ನಿವೇಶನ ಪಡೆಯುವ ಕುರಿತು ಜಿಲ್ಲಾ ಮಟ್ಟದ ಸಮನ್ವಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅಂಗನವಾಡಿಯಲ್ಲಿ ದಾಖಲಾಗಿರುವ ಮಕ್ಕಳು 6 ವರ್ಷದ ನಂತರ ನೇರವಾಗಿ ಶಾಲೆಗೆ ಪ್ರವೇಶ ಪಡೆಯುವುದರಿಂದ ಸ್ಥಳಾವಕಾಶವಿರುವಂತಹ ಸರ್ಕಾರಿ ಶಾಲಾ ಆವರಣದಲ್ಲಿ ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಿದರೆ ಎರಡೂ ಇಲಾಖೆಗಳಿಗೂ ಅನುಕೂಲವಾಗುತ್ತದೆ. ಅಕ್ಕ ಪಕ್ಕದ ಮನೆಯಿಂದ ಶಾಲೆಗೆ ಹೋಗುವ ಮಕ್ಕಳ ಜೊತೆ ಅಂಗನವಾಡಿಗೆ ಬರುವ ಮಕ್ಕಳಿಗೂ ಸಹಕಾರಿಯಾಗುತ್ತದೆ. ಇದರಿಂದ ಯಾವುದೇ ಮಗು ಶಾಲೆಗೆ ದಾಖಲಾಗದೇ ಹೊರಗುಳಿಯುವುದನ್ನು ತಪ್ಪಿಸಬಹುದಾಗಿದೆ. ನಿರಂತರ ಶಿಕ್ಷಣ ಪಡೆಯಲು ಸಾಧ್ಯವಾಗುತ್ತದೆ. ಶಾಲೆಯ ಆವರಣದಲ್ಲಿಯೇ ಅಂಗನವಾಡಿ ಮಕ್ಕಳು 3 ವರ್ಷಗಳ ಕಾಲ ಇರುವುದರಿಂದ ಶಾಲೆಗೆ ಸೇರಿದಾಗ ಶಾಲೆಯ ಭಯವಿಲ್ಲದೆ ಮಕ್ಕಳು ಬರಲು ಅಭ್ಯಾಸವಾಗುತ್ತದೆ. ಈ ಹಿನ್ನಲೆಯಲ್ಲಿ ಸರ್ಕಾರಿ ಶಾಲಾ ಆವರಣದಲ್ಲಿ ಅಂಗನವಾಡಿ ಕಟ್ಟಡ ನಿರ್ಮಿಸಲು ಸ್ಥಳಾವಕಾಶ ಇದ್ದಲ್ಲಿ ಕಟ್ಟಡ ಕಟ್ಟಲು ಸಂಪೂರ್ಣ ಸಹಕಾರ ನೀಡಲು ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ತಿಳಿಸಿದರು.

ಪ್ರಸ್ತುತ ನಗರ ಪ್ರದೇಶದಲ್ಲಿ 195 ಮತ್ತು ಗ್ರಾಮೀಣ ಪ್ರದೇಶದಲ್ಲಿ 224 ಕಟ್ಟಡಗಳ ಅವಶ್ಯಕತೆ ಇದೆ. ಹೊಸವಾಗಿ ರಿಮೋಟ್ ಸೆನ್ಸಿಂಗ್ ತಂತ್ರಾಂಶದ ಮೂಲಕ ನಗರ ಪ್ರದೇಶದಲ್ಲಿ 104, ಗ್ರಾಮೀಣ ಪ್ರದೇಶದಲ್ಲಿ 19. ಒಟ್ಟು 123 ನಿವೇಶನಗಳನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಗುರುತಿಸಿರುತ್ತಾರೆ. ಸದರಿ 123 ನಿವೇಶನಗಳನ್ನು ಒಂದು ವಾರದ ಒಳಗಾಗಿ ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆ ಅಧಿಕಾರಿಗಳು, ತಹಶೀಲ್ದಾರರು ಹಾಗೂ ಪಂಚಾಯತ್ ರಾಜ್ ಇಲಾಖೆ ಅಧಿಕಾರಿಗಳು, ಸದರಿ ನಿವೇಶನಗಳನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಹಸ್ತಾಂತರಿಸಲು ತಿಳಿಸಿದರು.

ಶಾಲಾ ಆವರಣದಲ್ಲಿ ನಿವೇಶನ ಲಭ್ಯತೆ ಇದ್ದಲ್ಲಿ ನಿವೇಶನ ನೀಡಲು ಮತ್ತು ಶಾಲಾ ಕಟ್ಟಡಗಳಲ್ಲೇ ಅಂಗನವಾಡಿ ಕಟ್ಟಡಗಳು ನಡೆಯುತ್ತಿದ್ದರೆ, ಅದೇ ಕೊಠಡಿಯಲ್ಲಿ ಅಂಗನವಾಡಿಗಳಿಗೆ ಬೇಕಾದ ಎಲ್ಲಾ ಸೌಲಭ್ಯಗಳನ್ನೊಳಗೊಂಡ ಕಟ್ಟಡ ನಿರ್ಮಾಣ ಮಾಡಲು ಸಂಪೂರ್ಣ ಸಹಕಾರ ನೀಡಲು ಶಿಕ್ಷಣ ಇಲಾಖೆಯು ಸಹಕರಿಸಬೇಕಾಗಿ ಎಂದು ಸೂಚಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ವಾಸಂತಿ ಉಪ್ಪಾರ್ ಮಾತನಾಡಿ ಅಂಗನವಾಡಿ ಕೇಂದ್ರಗಳಿಗೆ ಕಟ್ಟಡಗಳ ನಿರ್ಮಾಣಕ್ಕಾಗಿ ದಾವಣಗೆರೆ ಜಿಲ್ಲೆಯಲ್ಲಿ 1771 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, 1160 ಸ್ವಂತ ಕಟ್ಟಡಗಳಲ್ಲಿ ನಡೆಯುತ್ತಿವೆ. 399 ಅಂಗನವಾಡಿಗಳು ಬಾಡಿಗೆ ಕಟ್ಟಡ ಮತ್ತು 109 ಶಾಲೆ, 103 ಸಮುದಾಯ ಹಾಗೂ ಇತರೆ ಕಟ್ಟಡಗಳಲ್ಲಿ ನಡೆಯುತ್ತಿವೆ ಎಂದು ತಿಳಿಸಿದರು.

ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತರಾದ ರೇಣುಕಾ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕರಾದ ಕೊಟ್ರೇಶ್. ಜಿ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಮುನಿಸಿಪಾಲಿಟಿ ಹಂತ-4ರ ಯೋಜನೆಯಡಿ ಉಚಿತ ವೈಯಕ್ತಿಕ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಸಕ್ತ ಸಾಲಿನ ನಗರೋತ್ಥಾನ (ಮುನಿಸಿಪಾಲಿಟಿ) ಹಂತ–4 ಯೋಜನೆಯಡಿ ಶೇ 24.10, 7.25 ಮತ್ತು ಶೇ 5 ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ, ಅಲ್ಪಸಂಖ್ಯಾತ ವರ್ಗಗಳ ನಿರುದ್ಯೋಗಿ ಯುವತಿಯರಿಗೆ ಉಚಿತ ಹೊಲಿಗೆ ಯಂತ್ರ, ಮನೆ ಮೇಲ್ಛಾವಣಿ ದುರಸ್ಥಿಗೆ ಸಮಾಗ್ರಿಗಳ ಖರೀದಿಗೆ ಧನಸಹಾಯ, ಇತರೆ ಬಡ ವರ್ಗದ ಉದ್ದಿಮೆದಾರರಿಗೆ ಸಹಾಯಧನ ಮತ್ತು ದೈಹಿಕ ವಿಕಲಚೇತನರಿಗೆ ತ್ರಿಚಕ್ರ ವಾಹನ, ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಗಳನ್ನು ನೀಡಲು ಅರ್ಹ ಫಲಾನುಭವಿಗಳಿಂದ ವೈಯಕ್ತಿಕ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಹರು ಸೌಲಭ್ಯ ಪಡೆಯಲು ಪಾಸ್‌ಪೋರ್ಟ್ 2 ಭಾವಚಿತ್ರ, ಆಧಾರ್ ಕಾರ್ಡ್ ಜೆರಾಕ್ಸ್, ಚುನಾವಣಾ ಗುರುತಿನ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್ ಪ್ರತಿ , ಮನೆಯ ಇ–ಖಾತೆ ಜೆರಾಕ್ಸ್ ಪ್ರತಿ, ನಿವಾಸಿ ದೃಢೀಕರಣ, ವ್ಯಾಸಂಗ ಪ್ರಮಾಣ ಪತ್ರದೊಂದಿಗೆ ಜುಲೈ.15 ರೊಳಗಾಗಿ ಜಗಳೂರು ಪಟ್ಟಣ ಪಂಚಾಯಿತಿ ಕಾರ್ಯಾಲಯಕ್ಕೆ ಸಲ್ಲಿಸಲು ಮುಖ್ಯಾಧಿಕಾರಿ ತಿಳಿಸಿದ್ದಾರೆ.

### ಪಿಹೆಚ್‌ಡಿ ಫೆಲೋಶಿಪ್‌ಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಸಕ್ತಸಾಲಿನಲ್ಲಿಪಿ.ಹೆಚ್.ಡಿವ್ಯಾಸಂಗಮಾಡುತ್ತಿರುವ ಅರ್ಹ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಸೇವಾಸಿಂಧೂ ಪೋರ್ಟಲ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಅರ್ಜಿದಾರರು https://sevasindhu.karnataka.gov.in/sevasindhu/departmentservice ಈ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ಪಿಹೆಚ್‌ಡಿ ಫೆಲೋಶಿಪ್‌ಗೆ ಅರ್ಜಿ ಸಲ್ಲಿಸಬಹುದು.. ಅರ್ಜಿ ಸಲ್ಲಿಸಿದ ಪ್ರತಿ ಹಾಗೂ ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿರುತ್ತದೆ.ಹೆಚ್ಚಿನ ಮಾಹಿತಿಗಾಗಿ https://dom.karnataka.gov.in. ವೀಕ್ಷಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ತಿಳಿಸಿದ್ದಾರೆ.

### ಕಣ್ಣಿನ ತಪಾಸಣಾ ಶಿಬಿರ ಉದ್ಘಾಟನೆ



» **ಹೊಸದುರ್ಗ**

ಪ್ರಸ್ತುತ ದಿನಗಳಲ್ಲಿ ಸೌಂದರ್ಯ ವರ್ಧಕಗಳು ಮತ್ತು ಅಲಂಕಾರಿಕ ವಸ್ತುಗಳನ್ನು ತೀರಾ ಸೌಂದರ್ಯ ಹೆಚ್ಚು ಮಾಡಲು ಬಳಸುವುದರಿಂದ ಪಂಚೇಂದ್ರಿಯಗಳ ಶಕ್ತಿಯನ್ನು ಕಳೆದುಕೊಳ್ಳುತ್ತಿವೆ ಎಂದು ಶಿವಣ್ಣ.ಎಸ್ ಆತಂಕ ವ್ಯಕ್ತಪಡಿಸಿದರು. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ತಾಲ್ಲೂಕಿನ ಕಂಗುವಳ್ಳಿ ಗ್ರಾಮದಲ್ಲಿ ತಾಲ್ಲೂಕು ಮಟ್ಟದ ಕಣ್ಣಿನ ತಪಾಸಣಾ ಶಿಬಿರದ ಕಾರ್ಯಕ್ರಮ ಉದ್ಘಾಟನೆ ಮಾಡಿ ಮಾತನಾಡಿದ ಅವರು ಪ್ರಾಚೀನ ಅಲಂಕಾರಿಕ ವಸ್ತುಗಳು ಪಂಚೇಂದ್ರಿಯಗಳ ರಕ್ಷಣೆ ಮಾಡುತ್ತಿತ್ತು. ಇಂದ್ರಿಯಗಳಿಗೆ ಶಕ್ತಿ ಕೊಡುತ್ತಿದ್ದವು. ಕಣ್ಣಿಗೆ ಕಾಡಿಗೆ ಚರ್ಮಕ್ಕೆ ಎಣ್ಣೆ ಇತ್ಯಾದಿಗಳ ಬಳಕೆಯಿಂದ ಮನುಷ್ಯನ ಪಂಚೇಂದ್ರಿಯಗಳು ವೃದ್ಧಿಯಾಗುತ್ತವೆ. ಆದರೆ ಪ್ರಸ್ತುತ ದಿನಗಳಲ್ಲಿ ತನನ್ನು ತಾನು ಬಿಂಬಿಸಿಕೊಳ್ಳುವ ಉದ್ದೇಶದಿಂದ ತಮ್ಮ ಬಾಹ್ಯ ಸೌಂದರ್ಯಗಳಿಗೆ ಹೆಚ್ಚಿನ ಒತ್ತು ಕೊಟ್ಟು ಪಂಚೇಂದ್ರಿಯಗಳನ್ನು ಕಳೆದುಕೊಳ್ಳುತ್ತಿದ್ದೇವೆ. ಅನಾವಶ್ಯಕ ಸೌಂದರ್ಯ ವರ್ಧಕಗಳನ್ನು ಉಪಯೋಗಿಸುವುದರಿಂದ ಕಣ್ಣಿನ ದೂರ ದೃಷ್ಟಿ ಮತ್ತು ಸಮೀಪ ದೃಷ್ಟಿ ಕಳೆದುಕೊಳ್ಳುತ್ತಿದ್ದಾರೆ. ಈ ಬಗ್ಗೆ ತಾಲ್ಲೂಕಿನಾದ್ಯಾಂತ ಹರಿವು ಮೂಡಿಸಲಾಗುತ್ತಿವೆ. ನೇತ್ರಾಲಯ ಕಣ್ಣಿನ ಆಸ್ಪತ್ರೆಯ ಸಂಯೋಗದಿಂದ ಉಚಿತ ತಪಾಸಣೆಯನ್ನು ಮಾಡುತ್ತಿದ್ದು ಇದರ ಉಪಯೋಗವನ್ನು ಪಡೆದುಕೊಳ್ಳಬೇಕು ಎಂದು ಮನವಿ ನೀಡಿದರು. ಕಾರ್ಯಕ್ರಮದಲ್ಲಿ ಕಂಗುವಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ರಾಮಪ್ಪ, ಒಕ್ಕೂಟ ಅಧ್ಯಕ್ಷೆ ಶ್ರೀಮತಿ ಭಾಗ್ಯಮ್ಮ, ಗ್ರಾಮ ಪಂಚಾಯಿತಿ ಸದಸ್ಯರು ಸೇರಿದಂತೆ ಕಂಗುವಳ್ಳಿ , ಕೊರಟಿಗೆರೆ ಗ್ರಾಮಸ್ಥರು ಹಾಜರಿದ್ದರು." ಹಾಜರಿದ್ದರು, ನೇತ್ರಾಲಯ ಕಣ್ಣಿನ ಆಸ್ಪತ್ರೆಯ ಸಿಬ್ಬಂದಿಗಳು ಉಚಿತವಾಗಿ ಕಣ್ಣಿನ ತಪಾಸಣೆ ಮಾಡಿ ಅಗತ್ಯ ಇದ್ದವರಿಗೆ ಕನ್ನಡಕಗಳನ್ನು ವಿತರಣೆ ಮಾಡಿದರು. ಜ್ಞಾನ ವಿಕಾಸ ಸಮನ್ವಯಾದಿಕಾರಿ ಲೀಲಾ ಸ್ವಾಗತಿಸಿ, ಭಾಗ್ಯ ವಂದಿಸಿ ರಾಣಿ ನಿರೂಪಿಸಿದರು,

---

ತರಬೇತಿ ಕಾರ್ಯಕ್ರಮದಲ್ಲಿ ಡಿಸಿಸಿ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಇಲ್ಯಾಸ್ ಉಲ್ಲಾ ಷರೀಫ್

# ಸಹಕಾರ ಸಂಘಗಳಿಗೆ ಕಂಪ್ಯೂಟರ್ಸೈಸೇಷನ್ ಅಳವಡಿಕೆ

» **ಚಿತ್ರದುರ್ಗ**

ಪ್ರಾಥಮಿಕಕೃಷಿಪತ್ತಿನಸಹಕಾರಸಂಘಗಳಿಗೆ ದೇಶದಾದ್ಯಂತ ಕಂಪ್ಯೂಟರ್ಸೈಸೇಷನ್ ಅಳವಡಿಕೆ ಕಾರ್ಯ ನಡೆಯುತ್ತಿದ್ದು, ಚಿತ್ರದುರ್ಗ ಜಿಲ್ಲೆಯಲ್ಲಿ 158 ಸಹಕಾರ ಸಂಘಗಳಲ್ಲಿ 148 ಪಿಎಸಿಎಸ್ ಸಹಕಾರ ಸಂಘಗಳಿಗೆ ಕಂಪ್ಯೂಟರ್ಸೈಸೇಷನ್ ಅಳವಡಿಕೆ ಕೆಲಸ ನಡೆಯುತ್ತಿದೆ. ಇದರಿಂದ ಜನರಿಗೆ ನಂಬಿಕೆ ಮತ್ತು ವಿಶ್ವಾಸ ಬರುತ್ತದೆ ಎಂದು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಇಲ್ಯಾಸ್ ಉಲ್ಲಾ ಷರೀಫ್ ಹೇಳಿದರು.

ನಗರದ ಕೆಳಗೋಟೆಯ ಬಿ.ಎಲ್. ಗೌಡ ಲೇಔಟ್‌ನ ಸಹಕಾರ ಭವನದಲ್ಲಿ ಸೋಮವಾರ ಸಹಕಾರ ಇಲಾಖೆ, ರಾಜ್ಯ ಸಹಕಾರ ಮಹಾಮಂಡಳ ಹಾಗೂ ಜಿಲ್ಲಾ ಸಹಕಾರ ಯೂನಿಯನ್ ವತಿಯಿಂದ ಚಿತ್ರದುರ್ಗ, ಹೊಳಲ್ಕೆರೆ ಹಾಗೂ ಹೊಸದುರ್ಗ ತಾಲ್ಲೂಕುಗಳಲ್ಲಿ ಬರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಹಕಾರ ಸಂಘಗಳ ಚುನಾವಣೆ ಜರುಗಿಸುವ ವಿಧಿವಿಧಾನಗಳ ಕುರಿತು ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ವತಿಯಿಂದ ಇಂದು ತರಬೇತಿ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಸಹಕಾರ ಚುನಾವಣೆ ದಿನಾಂಕದ 5 ವರ್ಷಗಳಲ್ಲಿ 2 ವಾರ್ಷಿಕ ಮಹಾಸಭೆಗೆ ಹಾಜರಾದಲ್ಲಿ ಚುನಾವಣೆ ಮತದಾನಕ್ಕೆ ಅರ್ಹರಾಗಿರುತ್ತಾರೆ. ಪ್ರಜಾಪ್ರಭುತ್ವದಲ್ಲಿ ಚುನಾವಣೆಗೆ ಬಹಳ ಮಹತ್ವವಿದೆ.



ಚುನಾವಣೆ ಸುಗುಮವಾಗಿ ನಡೆಯಲು ಸಹಕಾರ ಸಂಘಗಳ ಕಾರ್ಯನಿರ್ವಾಹಕರ ಜವಾಬ್ದಾರಿ ಬಹಳ ಮುಖ್ಯ. ಕಾನೂನು ಏನು ಹೇಳುತ್ತದೆ ಅದನ್ನು ಅರ್ಥಮಾಡಿಕೊಂಡು ಕೆಲಸ ಮಾಡಬೇಕು. ಚುನಾವಣೆ ಕುರಿತು ನೀಡುವ ಇಂತಹ ಉಪನ್ಯಾಸವನ್ನು ಸಂಘದ ಪ್ರತಿನಿಧಿಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು. ಕಾರ್ಯಕ್ರಮ ಉದ್ಘಾಟಿಸಿದ ಸಹಕಾರರತ್ನ ಪುರಸ್ಕೃತರು ಹಾಗೂ ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಆರ್.ರಾಮರೆಡ್ಡಿ ಮಾತನಾಡಿ, ರಾಜ್ಯ ಸಹಕಾರ ಮಹಾಮಂಡಳದ ವತಿಯಿಂದ ಇನ್ನು ಹೆಚ್ಚಿನ ಒಳ್ಳೆಯ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಸಂಬಂಧಿಸಿದವರು ಚುನಾವಣೆ ನಡೆಸುವ ಬಗ್ಗೆ ತರಬೇತಿಯ ಉಪನ್ಯಾಸಕರಿಂದ ಮಾಹಿತಿಯನ್ನು ಪಡೆದುಕೊಳ್ಳಬೇಕು. ಇದೇ ರೀತಿ ಇಂತಹ ಕಾರ್ಯಕ್ರಮಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು. ಇದೇ ರೀತಿಯ ಸಹಕಾರ ದೊರೆತಲ್ಲಿ ಸಹಕಾರ ಮಹಾಮಂಡಳದಿಂದ ಇನ್ನಷ್ಟು ತರಬೇತಿಗಳನ್ನು ನೀಡಲು ನಾವು ಸಿದ್ದರಿದ್ದೇವೆ" ಎಂದು ಹೇಳಿದರು.

ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಜಿಂಕಲು ಬಸವರಾಜ್ ಮಾತನಾಡಿ, ಚುನಾವಣೆ ವಿಚಾರದಲ್ಲಿ ಯಾವುದೇಗೊಂದಲವಾಗದಂತೆಸಹಕಾರ ಸಂಘಗಳಲ್ಲಿ ಚುನಾವಣೆ ನಡೆಸುವ ಸಲುವಾಗಿ ತರಬೇತಿ ಹಮ್ಮಿಕೊಂಡಿದ್ದು, ಹೆಚ್ಚಿನ ಮಾಹಿತಿ ಪಡೆಯಬೇಕು ಎಂದು ತಿಳಿಸಿದರು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ರೈತಾಪಿ ವರ್ಗಕ್ಕೆ, ಬಡವರಿಗೆ ಮತ್ತು ಮಹಿಳೆಯರಿಗೆ ಅನುಕೂಲವಾಗುವಂತೆ ಕಾರ್ಯನಿರ್ವಹಿಸಬೇಕು. ಸಂಘದ ಮುಖ್ಯ ಕಾರ್ಯನಿರ್ವಾಹಕರಿಗೆ ಉತ್ತಮವಾಗಿ ಜ್ಞಾನ ಹೊಂದಿದ ಸಿಬ್ಬಂದಿಗಳನ್ನು ಸಂಘದ ಆಡಳಿತ ಮಂಡಳಿ ನೇಮಕ ಮಾಡಿಕೊಂಡು, ಸಂಘದಲ್ಲಿ ಹೊಸ ಹೊಸ ಬಗೆಯ ತಿದ್ದುಪಡಿಗಳನ್ನು ಮಾಡಿಕೊಂಡು ಸಂಘವನ್ನು ಲಾಭಾಂಶ ಬರುವಂತೆ ಕೆಲಸ ನಿರ್ವಹಿಸಬೇಕು ಸಂಘವನ್ನು ಆರ್ಥಿಕವಾಗಿ ಸದೃಢಗೊಳಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಹೆಚ್.ಎಂ.ದ್ಯಾಮಣ್ಣ ರವರು ಮಾತನಾಡಿ, ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ವತಿಯಿಂದ ಪ್ರತಿ ಬಾರಿಯಂತೆ ಈ ಬಾರಿಯೂ ಚುನಾವಣೆ ನಡೆಸುವ ಕುರಿತು ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ. 3 ತಾಲ್ಲೂಕುಗಳ ಎಲ್ಲಾ ಪ್ರತಿನಿಧಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು. ಯಾರು ಕೂಡ ಇಂತಹ ತರಬೇತಿಯನ್ನು ನಿರ್ಲಕ್ಷ್ಯ ಮಾಡದೇ ಚುನಾವಣೆ ಬಗ್ಗೆ ಮಾಹಿತಿಯನ್ನು ತಿಳಿದುಕೊಳ್ಳಬೇಕು ಹಾಗೂ ಇದೇ ರೀತಿ ಮುಂದಿನ ತರಬೇತಿಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಹಕರಿಸಬೇಕು ಎಂದು ಮನವಿ ಮಾಡಿದದರು.

ಸಹಕಾರ ಸಂಘಗಳ ಚುನಾವಣೆ ಜರುಗಿಸುವ ವಿಧಿ–ವಿಧಾನಗಳ ಕುರಿತು ಚಿಕ್ಕಮಗಳೂರಿನ ಸಹಕಾರ ಸಂಘಗಳ ಸಹಾಯಕ ನಿಬಂಧಕ (ನಿವೃತ್ತ) ಎಸ್.ವಿ.ಬಸವರಾಜ್ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಯೂನಿಯನ್ ನಿರ್ದೇಶಕ ಜೆ.ಶಿವಪ್ರಕಾಶ್, ಎನ್.ಮಂಜುನಾಥ್, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಸಹಾಯಕ ನಿರ್ದೇಶಕ ಪಿ.ಅಂಜನಮೂರ್ತಿ, ಸಹಕಾರ ಸಂಘಗಳ ನಿರೀಕ್ಷಕ ಎಸ್. ಸಂಜಯ್‌ರಾಮ್, ರಾಮು, ಡಿಸಿಸಿ ಬ್ಯಾಂಕ್ ಮೇಲ್ವಿಚಾರಕರಾದ ಶಂಕರಮೂರ್ತಿ, ಹಿಮಂತರಾಜ್ ಹಾಗೂ ಚಿತ್ರದುರ್ಗ, ಹೊಸದುರ್ಗ ಮತ್ತು ಹೊಳಲ್ಕೆರೆ ತಾಲ್ಲೂಕಿನ ಕೃಷಿ ಪತ್ತಿನ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರು ಇದ್ದರು.

---

# ಗ್ರಾಮಗಳಲ್ಲಿ ಕಲುಷಿತ ನೀರು ಪೂರೈಕೆ ಆಗದಂತೆ ನೋಡಿಕೊಳ್ಳಲು ಸೂಚನೆ

» **ದಾವಣಗೆರೆ**

ಜಿಲ್ಲೆಯ ಎಲ್ಲಾ ಗ್ರಾಮಗಳ ವ್ಯಾಪ್ತಿಯಲ್ಲಿ ಪೂರೈಕೆಯಾಗುವ ನೀರಿನಲ್ಲಿ ಕಲುಷಿತ ನೀರು ಪೂರೈಕೆಯಾಗದಂತೆ ನೋಡಿಕೊಳ್ಳಲು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ನೀಡಿದರು.

ಅವರು ಸೋಮವಾರ ಜಿಲ್ಲಾ ಪಂಚಾಯತ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಇವರ ಸಹಯೋಗದಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಫೀಲ್ಡ್ ಟೆಸ್ಟ್ ಕಿಟ್ ಎಚ್2ಎಸ್ ವೈಲ್ಸ್ ಉಪಯೋಗಿಸಿ ನೀರಿನ ಪರೀಕ್ಷೆಗಳನ್ನು ಕೈಗೊಳ್ಳುವ ಬಗ್ಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಏರ್ಪಡಿಸಲಾದ ತರಬೇತಿ ಕಾರ್ಯಗಾರದಲ್ಲಿ ಅಧ್ಯಕ್ಷತೆ ವಹಿಸಿ ಮತನಾಡಿದರು. ಗ್ರಾಮೀಣ ಭಾಗದಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಾರ್ವಜನಿಕರ ಅನಾರೋಗ್ಯಕ್ಕೆ ಕಾರಣವಾಗುತ್ತಿರುವ ಪ್ರಕರಣಗಳು ಹೆಚ್ಚಾಗಿ ಕಂಡು ಬರುತ್ತಿರುವುದರಿಂದ ಕುಡಿಯುವ ನೀರಿನ ಪರೀಕ್ಷೆ, ಕುಡಿಯುವ ನೀರು ಕಲುಷಿತಕ್ಕೆ ಕಾರಣಗಳು, ಇದರ ದುಷ್ಪರಿಣಾಮಗಳು ಹಾಗೂ ನೀರು ಕಲುಷಿತವಾಗದಂತೆ ನಿರ್ವಹಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ವಿವರವಾಗಿ ಪರಿಶೀಲನೆ ನಡೆಸಬೇಕಾಗಿ ಸೂಚಿಸಿದರು.

ಪೈಪ್‌ಲೈನ್ ನೆಟ್‌ವರ್ಕ್‌ನಲ್ಲಿ ಎಲ್ಲಿಯಾದರು ಸೋರಿಕೆಯಾಗಿದೆ ಎಂದು ಕಂಡು ಬಂದರೆ ಅದನ್ನು ಪ್ಲಗ್ ಮಾಡಿ ಸೋರಿಕೆಯಾಗದಂತೆ ಕ್ರಮವಹಿಸಬೇಕು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಜಲ ಜೀವನ್ ಮಿಷನ್ ಯೋಜನೆಯಡಿ ಪ್ರತಿ ಗ್ರಾಮದ ನೀರಿನ ಮೂಲಗಳ ಶುದ್ಧತೆಯ ಕುರಿತು ವರ್ಷದಲ್ಲಿ ಕನಿಷ್ಠ ನಾಲ್ಕು ಬಾರಿ ಕಡ್ಡಾಯವಾಗಿ



ಪರೀಕ್ಷೆ ನಡೆಸಬೇಕು.

ಈ ರೀತಿ ಪರೀಕ್ಷೆ ನಡೆಸಲು ಪ್ರತಿ ಗ್ರಾಮ ಪಂಚಾಯಿತಿಗೆ ಎಫ್.ಟಿ.ಕೆ ಫೀಲ್ಡ್ ಟೆಸ್ಟ್ ಕಿಟ್ ನೀಡಲಾಗಿದ್ದು ಎಲ್ಲಾ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಲ್ಯಾಬ್‌ಗಳಲ್ಲಿ ನೀರು ಸಂಗ್ರಹಗಾರರಿಂದ ನೀರು ಸಂಗ್ರಹಿಸಿ ನೀರಿನ ಮೂಲಗಳನ್ನು ಪರೀಕ್ಷೆ ನಡೆಸಿ ವರದಿಯನ್ನು ಗ್ರಾಮ ಪಂಚಾಯಿತಿಗಳಿಗೆ ನೀಡಲು ತಿಳಿಸಿದರು.

ಮಳೆಗಾಲ ಆರಂಭವಾಗಿರುವುದರಿಂದ ಸಾಂಕ್ರಾಮಿಕ ರೋಗ ತಡೆಗಟ್ಟಲು ಮುನ್ನೆಚ್ಚರಿಕೆ ಕ್ರಮವಾಗಿ ಈ ಸಮೀಕ್ಷೆ ನಡೆಸಲಾಗುತ್ತಿದೆ. ಆಶಾ ಕಾರ್ಯಕರ್ತೆಯರ ಜೊತೆ ಮನೆಗೆ ತೆರಳಿ ಸಮೀಕ್ಷೆ ಸಮಯದಲ್ಲಿ ನಿಂತ ನೀರಲ್ಲಿ ಸೊಳ್ಳೆಗಳ ಸಂತಾನೋತ್ಪತ್ತಿ ತಾಣಗಳಾದ ಹೂವಿನ ಕುಂಡ, ಹಳೆ ಟೈರ್, ಹಳೆ ಎಣ್ಣೆಯ ಡ್ರಮ್‌ಗಳಲ್ಲಿ ಕಂಡು ಬಂದ ಲಾರ್ವ ತಾಣಗಳನ್ನು ತಕ್ಷಣ ನಾಶಕ ಟೇಮಿಪಾಸ್ ದ್ರಾವಣವನ್ನು ಹಾಕಿ ಸೊಳ್ಳೆಗಳಿಂದ ಹರಡುವ ರೋಗ ತಡೆಯಬೇಕು ಎಂದು ತಿಳಿಸಿದರು.

ಅನೇಕ ಜಿಲ್ಲೆಗಳ ಗ್ರಾಮಗಳಲ್ಲಿ ಕಲುಷಿತ ನೀರು ಸೇವನೆಯಿಂದ ಸಾರ್ವಜನಿಕರು ಅನಾರೋಗ್ಯಕ್ಕೆ ತುತ್ತಾಗುತ್ತಿರುವ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿದೆ. ಈ ಹಿನ್ನಲೆಯಲ್ಲಿ ನೀರಿನ ಪರೀಕ್ಷೆ ಮಾಡಿದ ನಂತರ ನೀರು ಕಲುಷಿತವಾಗಿದ್ದಲ್ಲಿ ಮತ್ತು ಕುಡಿಯಲು, ಬಳಸಲು ಯೋಗ್ಯವಲ್ಲದ ನೀರು ಬಳಸದಂತೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕ್ರಮ ವಹಿಸಬೇಕಾಗಿರುತ್ತದೆ. ಒಂದು ವೇಳೆ ಕಲುಷಿತ ನೀರಿನಿಂದ ಸಮಸ್ಯೆ ಬಂದರೆ ಪಿಡಿಓ ಮತ್ತು ಸಹಾಯಕ ಇಂಜಿನಿಯರ್ ಮೇಲೆ ಕಾನೂನು ರೀತಿ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದರು.

ನೀರಿನ ಬಾವಿ, ಕೆರೆ, ನದಿ, ನಳ ನೀರು, ಟ್ಯಾಂಕ್‌ಗಳ ನೀರಿನ ಗುಣಮಟ್ಟದ ಬಗ್ಗೆ ಗ್ರಾಮ ಪಂಚಾಯತಿಗಳಲ್ಲಿ ಎಫ್.ಟಿ.ಕೆ ಟೆಸ್ಟ್ ಮೂಲಕ ಪರೀಕ್ಷಿಸಿ ನಂತರವೇ ಬಳಸಲು 'ಶುದ್ಧ ನೀರಿನ ಬಳಕೆ ನಿಮ್ಮ ಆದ್ಯತೆಯಾಗಲಿ' ಎಂಬ ಶೀರ್ಷಿಕೆಯ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ, ಜಿಲ್ಲಾ ಪಂಚಾಯತ್ ಮುಖ್ಯಯೋಜನಾಧಿಕಾರಿ ಮಲ್ಲನಾಯ್ಕ, ಕಾರ್ಯನಿರ್ವಹಣಾಧಿಕಾರಿ ಉತ್ತಮ್, ರಾಘವೇಂದ್ರ ಹೊನ್ನಳ್ಳಿ, ಗ್ರಾಮೀಣ ನೀರು ಸರಬರಾಜು ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಸೋಮ್ಲನಾಯಕ್, ಜಿಲ್ಲಾ ಯೋಜನಾ ವ್ಯವಸ್ಥಾಪಕ ಜಗದೀಶ್ ಬಿ.ಟಿ, ಪ್ರಯೋಗಾಲಯ ಸಿಬ್ಬಂದಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕಾರ್ಯಗಾರದಲ್ಲಿ ಉಪಸ್ಥಿತರಿದ್ದರು.

---

### ವಿದ್ಯಾರ್ಥಿ ನಿಲಯಕ್ಕೆ ರಾಜ್ಯ ಮಾನವ ಹಕ್ಕುಗಳ ಆಯೋಗದ ನ್ಯಾಯಾಂಗ ಸದಸ್ಯ ಎಸ್.ಕೆ.ವೆಂಟಿಗೋಡಿ ಭೇಟಿ



» **ಚಿತ್ರದುರ್ಗ**

ಚಿತ್ರದುರ್ಗ ನಗರದ ಸರ್ಕಾರಿ ವೃತ್ತಿಪರ ಕಾಲೇಜು ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ರಾಜ್ಯ ಮಾನವ ಹಕ್ಕುಗಳ ಆಯೋಗದ ನ್ಯಾಯಾಂಗ ಸದಸ್ಯರಾದ ಎಸ್.ಕೆ.ವೆಂಟಿಗೋಡಿ ಅವರು ಸೋಮವಾರ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ನಗರದ ಬಾಲಕಿಯರ ಸರ್ಕಾರಿ ವೃತ್ತಿಪರ ಕಾಲೇಜು ವಿದ್ಯಾರ್ಥಿ ನಿಲಯದಲ್ಲಿನ ಶೌಚಾಲಯ, ಸ್ನಾನಗೃಹ, ಅಡುಗೆ ಕೋಣೆ, ಗ್ರಂಥಾಲಯಗಳಿಗೆ ಖುದ್ದು ಭೇಟಿ ನೀಡಿ ಪರಿಶೀಲಿಸಿ, ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿದರು. ಈ ಸಂದರ್ಭದಲ್ಲಿ ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ವಿ.ಕೃಷ್ಣಮೂರ್ತಿ ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

### ಚುನಾವಣೆಯ ಕರಡು ಮತದಾರರ ಪಟ್ಟಿಗೆ ಆಕ್ಷೇಪಣೆ

» **ದಾವಣಗೆರೆ**

:ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಸಂಘದ 2024–29 ನೇ ಸಾಲಿಗೆ ಚುನಾವಣೆ ನಡೆಯಲಿದ್ದು ದಾವಣಗೆರೆ ತಾಲ್ಲೂಕು ವ್ಯಾಪ್ತಿಗೆ ಸಂಬಂಧಿಸಿದಂತೆ ಎಲ್ಲಾ ಇಲಾಖೆಯ ನೌಕರರ ವಿವರವನ್ನು ಪಡೆದುಕೊಂಡು ಕರಡು ಮತದಾರರ ಪಟ್ಟಿಯನ್ನು ತಯಾರಿಸಲಾಗಿದೆ. ಸರ್ಕಾರಿ ನೌಕರರ ಇಲಾಖಾವಾರು ಕರಡು ಮತದಾರರ ಪಟ್ಟಿಯನ್ನು ಎಸ್.ನಿಜಲಿಂಗಪ್ಪ ಬಡಾವಣೆಯಲ್ಲಿನ ಸರ್ಕಾರಿ ನೌಕರರ ಸಮುದಾಯ ಭವನ, ದಾವಣಗೆರೆ ಇಲ್ಲಿ ಪ್ರಕಟಿಸಲಾಗಿದ್ದು ಆಕ್ಷೇಪಣೆಗಳಿದ್ದಲ್ಲಿ ಜುಲೈ 10 ರೊಳಗಾಗಿ ಸಲ್ಲಿಸಲು ಜಿಲ್ಲಾಧ್ಯಕ್ಷರಾದ ವೀರೇಶ.ಎಸ್ ತಿಳಿಸಿದ್ದಾರೆ.

---

**ಪ್ರಮುಖ ಸುದ್ದಿ**

# ರೈತ ಯೋಜನೆಗಳ ಸದುಪಯೋಗ ಪಡೆದುಕೊಳ್ಳಲು ಕರೆ

» **ಚಳ್ಳಕೆರೆ**

ಚಳ್ಳಕೆರೆ ವಿಧಾನಸಭಾ ಕ್ಷೇತ್ರವೂ ಸೇರಿದಂತೆ ರಾಜ್ಯದ ಕೃಷಿ ಕ್ಷೇತ್ರವನ್ನು ಬಲಪಡಿಸಲು ರಾಜ್ಯ ಸರ್ಕಾರ ಎಲ್ಲಾ ರೀತಿಯ ಅಗತ್ಯಕ್ರಮಗಳನ್ನು ವಿವಿಧ ಯೋಜನೆಗಳ ಮೂಲಕ ಕೈಗೊಳ್ಳುತ್ತಿದೆ. ಅನ್ನದಾತನ ಬದುಕನ್ನು ಹಸನುಗೊಳಿಸಲು ಕೃಷಿ ಇಲಾಖೆ ಸಜ್ಜಾಗಿದ್ದು ರೈತ ಸಮುದಾಯ ಕೃಷಿ ಅಧಿಕಾರಿಗಳ ಸಲಹೆ ಸೂಚನೆಗಳನ್ನು ಅಳವಡಿಸಿಕೊಂಡು ಕೃಷಿಯಲ್ಲಿ ಆರ್ಥಿಕ ಲಾಭಪಡೆಯುವತ್ತ ಮುಂದಾಗಬೇಕೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಕೃಷಿ ಇಲಾಖೆ ಆವರಣದಲ್ಲಿ ಆತ್ಮಯೋಜನೆಯಡಿಯಲ್ಲಿ ರೈತರಿಗೆ ತರಬೇತಿ ಹಾಗೂ ಕೃಷಿ ವಿಜ್ಞಾನಿಗಳ ಸಂವಾದ ಕಾರ್ಯಕ್ರಮವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ,



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಚಳ್ಳಕೆರೆ ತಾಲ್ಲೂಕು ಶೇ.80ರಷ್ಟು ಶೇಂಗಾ ಬೆಳೆಯುವ ಪ್ರದೇಶವಾಗಿದೆ, ಇತ್ತಿಚಿನ ವರ್ಷಗಳಲ್ಲಿ ಸಾಕಷ್ಟು ನೀರಿನ ಸೌಲಭ್ಯವೂ ಒದಗಿದೆ, ಕೆಲವು ಸಂದರ್ಭಗಳಲ್ಲಿ ಮಾತ್ರ ಮಳೆ ಕೈಕೊಟ್ಟರೂ ರೈತರು ನಷ್ಟ ಅನುಭವಿಸಬೇಕಾಗುತ್ತದೆ. ಆದ್ದರಿಂದ ಶೇಂಗಾ ಬೆಳೆಗೆ ಪರ್ಯಾಯವಾಗಿ ಕಡಿಮೆ ಮಳೆಯಲ್ಲೂ ಉತ್ತಮ ಬೆಳೆಯಾಗಿ ರೈತರಿಗೆ ಉತ್ತಮ ಲಾಭವಾಗುವ ಬೆಳೆ ಬೆಳೆಯುವಂತೆ ಸಲಹೆ ನೀಡಿದರು.

ಶೇಂಗಾ ಬೆಳೆಗೆ ವಿಶೇಷ ಪ್ಯಾಕೇಜ್ ನೀಡಲು ಒತ್ತಾಯಿಸಿ ಸಂಬಂಧಪಟ್ಟ ಕೃಷಿ ಸಚಿವರೊಂದಿಗೆ ಚರ್ಚೆ ನಡೆಸಲಾಗುವುದು, ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿಗಾಗಿ ರಾಜ್ಯ ಸರ್ಕಾರ 8 ಸಾವಿರ ಕೋಟಿಯನ್ನು ವೆಚ್ಚವಾಗಿದೆ, ಕಳೆದ ವರ್ಷ ಕೇಂದ್ರ ಸರ್ಕಾರ ಬಜೆಟ್‌ನಲ್ಲಿ 5300 ಕೋಟಿ ಭದ್ರಾ ಮೇಲ್ದಂಡೆ ಯೋಜನೆ ಪೂರ್ಣಗೊಳಿಸಲು ಹಣ ನೀಡುವ ಭರವಸೆ ನೀಡಿದ್ದು ಅದು ಕಾರ್ಯಗತವಾಗಿಲ್ಲವೆಂದರು. ಭದ್ರಾ ಮೇಲ್ದಂಡೆ ಯೋಜನೆ ಜಾರಿಯಾದರೆ ತಾಲ್ಲೂಕಿನ 13515 ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ದೊರೆಯುತ್ತದೆ. ಫಸಲ್ ಭೀಮಾ ಯೋಜನೆಯಡಿ ರೈತರಿಗೆ ಸುಮಾರು 83 ಲಕ್ಷ ಹಣವನ್ನು ಮೋಸದಿಂದ ಲಪಟಾಯಿಸಿದ್ದು ಇದರ ತನಿಖೆ ನಡೆದು ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕೃಷಿ ಇಲಾಖೆಯ ಜಿಲ್ಲಾ ಜಂಟಿನಿರ್ದೇಶಕ ಡಾ.ಬಿ.ಮಂಜುನಾಥ, ರೈತರು ತಮ್ಮ ಸ್ವಾವಲಂಬಿ ಬದುಕು ರೂಪಿಸಿಕೊಳ್ಳಲು ಅವಶ್ಯಕವಿರುವ ಎಲ್ಲಾ ಸವಲತ್ತುಗಳನ್ನು ಸರ್ಕಾರ ನೀಡಲಿದೆ, ವಿಶೇಷವಾಗಿ ಇಂದು ನಾಲ್ಕು ಬೆಳೆಗೆ ಸಂಬಂಧಪಟ್ಟ ರೈತರಿಗೆ ಸ್ಪಷ್ಟ ಮಾಹಿತಿ ನೀಡಲು ಕರಪತ್ರವನ್ನು ವಿತರಣೆ ಮಾಡಲಾಗಿದೆ. ರೈತರ ಅನುಕೂಲಕ್ಕಾಗಿ ಕೃಷಿ, ಪಶು, ವನ ಸಖಿಗಳನ್ನು ನೇಮಕ ಮಾಡಿದ್ದು ಅವರ ಮೂಲಕವೂ ಸಹ ಕೃಷಿ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ರೈತರ ತರಬೇತಿ ಕಾರ್ಯಗಾರ ಕುರಿತು ರಾಜ್ಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ, ರೆಡ್ಡಿಹಳ್ಳಿವೀರಣ್ಣ ಮಾತನಾಡಿದರು. ವೇದಿಕೆಯಲ್ಲಿ ಜಿಲ್ಲಾ ಪಂಚಾಯಿತಿ ಕೆಡಿಪಿ ಸದಸ್ಯ ಓ.ರಂಗಸ್ವಾಮಿ, ರೈತ ಮುಖಂಡ ಚಿಕ್ಕಣ್ಣ, ಕೃಷಿ ವಿಜ್ಞಾನಿ ಓಂಕಾರಪ್ಪ, ಬಸವರಾಜು, ವಿರೂಪಾಕ್ಷಪ್ಪ, ರೇವಣ್ಣ, ಗುಡಿಹಳ್ಳಿರಂಗಣ್ಣ, ಉಪ ಕೃಷಿ ನಿರ್ದೇಶಕ ಪ್ರಭಾಕರ್, ಸಹಾಯಕ ಕೃಷಿ ನಿರ್ದೇಶಕರಾದ ಜೆ.ಅಶೋಕ್, ಜೀವನ್(ಅಭಿ) ಉಪಸ್ಥಿತರಿದ್ದರು.

# ಮಾದಕ ವಸ್ತುಗಳ ನಿಯಂತ್ರಣಕ್ಕೆ ವಿವಿಧ ಇಲಾಖಾ ಅಧಿಕಾರಿಗಳ ತಂಡ ರಚನೆ: ಡಿಸಿ ಟಿ.ವೆಂಕಟೇಶ್

» **ಚಿತ್ರದುರ್ಗ**

ಮಾದಕ ವಸ್ತುಗಳ ನಿಯಂತ್ರಣ ದಿಸೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡ ಅಧಿಕಾರಿಗಳ ತಂಡ ರಚಿಸಿ, ನಿಯಮಿತವಾಗಿ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿ ತಪಾಸಣೆ ನಡೆಸಲು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜರುಗಿದ ಮಾದಕ ವಸ್ತುಗಳ ನಿಯಂತ್ರಣ ಕುರಿತಾದ ಜಿಲ್ಲಾ ಮಟ್ಟದ ಸಮನ್ವಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಎಲ್ಲ ವಸತಿ ನಿಲಯಗಳಲ್ಲಿ ಪ್ರತಿ ತಿಂಗಳಿಗೊಮ್ಮೆ ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮದ ಕುರಿತು ವಿದ್ಯಾರ್ಥಿಗಳಿಗೆ ನಿಯಮಿತವಾಗಿ ಜಾಗೃತಿ ಮೂಡಿಸಿ, ಕಡ್ಡಾಯವಾಗಿ ವರದಿ ನೀಡಬೇಕು ಎಂದು ತಾಕೀತು ಮಾಡಿದರು.

ಮಾದಕ ವಸ್ತುಗಳ ನಿಯಂತ್ರಣ ಕುರಿತಂತೆ ಪೊಲೀಸ್ ಹಾಗೂ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಹಾಗೂ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ಹಾಸ್ಟೆಲ್, ಕಾಲೇಜು ಕ್ಯಾಂಪಸ್ ಮಾತ್ರವಲ್ಲದೇ ಕಾಲೇಜು ಕ್ಯಾಂಪಸ್ ಹೊರಗಡೆಯೂ ಪೆಟ್ಟಿಗೆ ಅಂಗಡಿ ಸೇರಿದಂತೆ ಕೆಲವು ನಿರ್ಧಿಷ್ಟ ಸ್ಥಳಗಳ ಅಡ್ಡಗಳ ಮೇಲೆಯೂ ತೀವ್ರ ನಿಗಾ ವಹಿಸಬೇಕು. ಮಾದಕ ವಸ್ತುಗಳ ಅಕ್ರಮ ಚಟುವಟಿಕೆಗಳಿಗೆ ಅವಕಾಶ ನೀಡದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದರು.



ತಾಲ್ಲೂಕುವಾರು ಕಂದಾಯ ಇಲಾಖೆ, ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳ ತಂಡ ರಚನೆ ಮಾಡಿ ಆಗಿಂದಾಗೆ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿ ತಪಾಸಣೆ ನಡೆಸಲು ಕ್ರಮ ವಹಿಸಲಾಗುವುದು ಎಂದರು.

ಜಿಲ್ಲೆಯಲ್ಲಿ ಯಾವುದೇ ಕಾರಣಕ್ಕೂ ಯುವ ಜನರು ಮಾದಕ ವಸ್ತುಗಳ ಬಳಕೆಯ ಬಲೆಗೆ ಬೀಳದಂತೆ ಎಚ್ಚರ ವಹಿಸುವುದು ಅಗತ್ಯವಾಗಿದ್ದು, ಶಿಕ್ಷಣ ಸಂಸ್ಥೆಗಳು ಕೂಡ ಆಂತರಿಕವಾಗಿ ಇಂತಹ ಅಕ್ರಮ ಚಟುವಟಿಕೆಗಳ ಬಗ್ಗೆ ತೀವ್ರ ನಿಗಾ ವಹಿಸುವಂತಹ ವ್ಯವಸ್ಥೆಯನ್ನು ಮಾಡಿಕೊಂಡು, ಮಾದಕ ವಸ್ತುಗಳ ಚಟುವಟಿಕೆ ಬೆಳವಣಿಗೆಗೆ ಅವಕಾಶ ನೀಡದಂತೆ ತೀವ್ರ ಕಟ್ಟೆಚ್ಚರ ವಹಿಸಬೇಕು ಎಂದರು.ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಮಾತನಾಡಿ, ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮದ ಕುರಿತು ಇಲಾಖೆ ವ್ಯಾಪ್ತಿಯ ಎಲ್ಲ ವಸತಿ ಶಾಲೆ ಹಾಗೂ ವಸತಿ ನಿಲಯದ ವಿದ್ಯಾರ್ಥಿಗಳಿಗೆ ತಿಳುವಳಿಕೆ ನೀಡಲಾಗಿದೆ. ಈ ಕುರಿತು ವಿದ್ಯಾರ್ಥಿಗಳಿಗೆ ಮೌಲ್ಯಯುತ ಶಿಕ್ಷಣ ನೀಡಲಾಗುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು.

ಎನ್‌ಎಸ್‌ಎಸ್ ಜಿಲ್ಲಾ ಬೋಧಕ ಲೋಕೇಶ್ ಮಾತನಾಡಿ, ಎನ್‌ಎಸ್‌ಎಸ್ ವಾರ್ಷಿಕ ಶಿಬಿರಗಳಲ್ಲಿ ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮ ಕುರಿತು ಉಪನ್ಯಾಸ, ಜಾಗೃತಿ ಜಾಥಾಗಳ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತಿದೆ ಎಂದು ತಿಳಿಸಿದರು. ಎನ್‌ಎಸ್‌ಎಸ್ ತಂಡಗಳು ಹಾಗೂ ಸ್ವಯಂ ಸೇವಕರ ತಂಡವು ಗ್ರಾಮಗಳಲ್ಲಿ ಜಾಗೃತಿ ಮೂಡಿಸಿ ತಂಬಾಕು ಮುಕ್ತ ಗ್ರಾಮಗಳನ್ನಾಗಿ ಮಾಡಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸಲಹೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ ಮಾತನಾಡಿ, ಮಾದಕ ವಸ್ತುಗಳ ಬಳಕೆ ಸಂಬಂಧಪಟ್ಟಂತೆ ಹೊಳಲ್ಕೆರೆ ಹಾಗೂ ಚಿತ್ರದುರ್ಗ ತಾಲ್ಲೂಕುಗಳಿಂದ ಸಾಕಷ್ಟು ದೂರುಗಳು ಬರುತ್ತಿವೆ. ದುಡ್ಡಿಗಾಗಿ ಶಾಲಾ-ಕಾಲೇಜು ವಿದ್ಯಾರ್ಥಿಗಳ ಭವಿಷ್ಯ ಹಾಳು ಮಾಡುವ ಪೆಡ್ಲರ್ ಕುರಿತು ಸ್ಥಳೀಯರು, ಅಧಿಕಾರಿಗಳು, ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು, ಅಥವಾ ಸಾರ್ವಜನಿಕರು ಮಾಹಿತಿ ನೀಡಿದರೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಎಸ್.ಜೆ.ಎಂ. ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲ ಭರತ್ ಮಾತನಾಡಿ, ಮಾದಕವಸ್ತುಗಳಸೇವನೆಯದುಷ್ಪರಿಣಾಮ ಕುರಿತಂತೆ ವಿದ್ಯಾರ್ಥಿಗಳಲ್ಲಿ ಈಗಾಗಲೆ ಜಾಗೃತಿ, ಉಪನ್ಯಾಸ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅಲ್ಲದೆ ನಿಯಮಿತವಾಗಿ ಕಣ್ಗಾವಲು ವಹಿಸಲಾಗುತ್ತಿದೆ ಎಂದರು. ಸಭೆಯಲ್ಲಿ ವಿವಿಧ ಕಾಲೇಜುಗಳ ಪ್ರಾಂಶುಪಾಲರು, ಮುಖ್ಯಸ್ಥರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ಜಿಟಿಟಿಸಿ ವಿದ್ಯಾರ್ಥಿಗಳ ಭವಿಷ್ಯದ ಬದುಕಿಗೂ ಆಸರೆ

» **ಚಳ್ಳಕೆರೆ**

ಕಳೆದ ಮೂರು ವರ್ಷಗಳಿಂದ ಆರಂಭವಾದ ಜಿಟಿಟಿಸಿ ಕೇಂದ್ರ ಇಂದು ತರಬೇತಿ ಪಡೆದ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶವನ್ನು ಒದಗಿಸುವ ಮೂಲಕ ಬಡ ವಿದ್ಯಾರ್ಥಿಗಳಿಗೆ ಬದುಕಿಗೆ ಬೆಳಕಾಗಿದೆ. ವಿಶೇಷವಾಗಿ ಪ್ರಾಂಶುಪಾಲ ಜಿ.ಆರ್.ತಿಪ್ಪೇಸ್ವಾಮಿ ಮತ್ತು ತಂಡ ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಹೆಚ್ಚು ಆದ್ಯತೆ ನೀಡುತ್ತಿರುವುದು ಸಂತಸ ವಿಷಯವೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಸೋಮವಾರ ಜಿಟಿಟಿಸಿ ಕೇಂದ್ರದ ಸಭಾಂಗಣದಲ್ಲಿ ಪ್ರಸ್ತುತ 2024ರಿಂದ ಆರಂಭಗೊಂಡ ಎರಡು ನೂತನ ಕೋರ್ಸ್‌ಗಳಿಗೆಚಾಲನೆ ನೀಡಿ ಮಾತನಾಡಿದರು. ಇದು ಎಲ್ಲಾ ವಿದ್ಯಾರ್ಥಿಗಳ ಬಾಳಿಗೆ ಬೆಳಕಾಗಲಿ ಎಂದು ಶುಭಹಾರೈಸುವುದಾಗಿ ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕಾಲೇಜು ಪ್ರಾಂಶುಪಾಲ ಜಿ.ಆರ್.ತಿಪ್ಪೇಸ್ವಾಮಿ, ಕ್ಷೇತ್ರದ ಶಾಸಕ ಟಿ.ರಘುಮೂರ್ತಿಯವರ ಅವಿರತ ಪರಿಶ್ರಮದಿಂದ ಈ ಕೇಂದ್ರ ಆರಂಭವಾಗಿದೆ. ಕಳೆದ ಮೂರು ವರ್ಷಗಳು ಪೂರೈಸಿ ನಾಲ್ಕನೇ ವರ್ಷಕ್ಕೆ ಪಾದಾರ್ಪಣೆ ಮಾಡಿದೆ. ಶಾಸಕರ ಪ್ರಯತ್ನದಿಂದ ಈಗ ನೂತನವಾಗಿ ಡಿಪ್ಲೊಮೊ




ಇನ್ ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ ಇಂಜಿನಿಯರಿಂಗ್, ಡಿಪ್ಲೊಮೊ ಇನ್ ಪ್ರಿಶಿಶನ್ ಮ್ಯಾನುಫ್ಯಾಕ್ಚರಿಂಗ್ ನೂತನ ಕೋರ್ಸ್‌ಗಳನ್ನು ಇಂದಿನಿಂದ ಆರಂಭಿಸಲಾಗಿದೆ. ಒಟ್ಟು 120 ವಿದ್ಯಾರ್ಥಿಗಳಿಗೆ ಅವಕಾಶವಿದ್ದು, ಚಳ್ಳಕೆರೆಯೂ ಸೇರಿದಂತೆ ವಿವಿಧೆಡೆಯಿಂದ ವಿದ್ಯಾರ್ಥಿಗಳು ಆಗಮಿಸಿ ದಾಖಲಾಗಿದ್ದಾರೆ. ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರ ನೂರಾರು ವಿದ್ಯಾರ್ಥಿಗಳ ಭವಿಷ್ಯಕ್ಕೆ ಬುನಾದಿಹಾಕುವ ನಿಟ್ಟಿನಲ್ಲಿ ಯಶಸ್ವಿ ಹೆಜ್ಜೆ ಇಟ್ಟಿದೆ. ರಾಜ್ಯದಲ್ಲದಷ್ಟೇಯಲ್ಲ, ರಾಷ್ಟ್ರ ಮಟ್ಟದಲ್ಲೂ ಹಲವಾರು ಕಂಪನಿಗಳು ನಮ್ಮಲ್ಲಿ ಕಲಿತ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿಕೊಂಡಿರುವುದು ಸಂತಸ ವಿಷಯ. ಇದೆಲ್ಲರ ಶ್ರೇಯಸ್ಸು ಶಾಸಕರಿಗೆ ಸಲ್ಲುತ್ತದೆ ಎಂದರು.

ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯರಾದ ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಪ್ಪ, ಹೊಯ್ಸಳಗೋವಿಂದ, ಎಂ.ಜೆ.ರಾಘವೇಂದ್ರ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಟಿ.ಶಶಿಧರ, ಕೆಡಿಪಿ ನಾಮನಿರ್ದೇಶನ ಸದಸ್ಯ ಸುರೇಶ್‌ಕುಮಾರ್ ಮುಂತಾದವರು ಭಾಗವಹಿಸಿದ್ದರು.

# ಪರಿಸರದ ಬಗ್ಗೆ ಎಲ್ಲರು ಕಾಳಜಿ ವಹಿಸಬೇಕು: ಮಂಜುನಾಥ್



» **ಚಿತ್ರದುರ್ಗ**

ಪರಿಸರದ ಬಗ್ಗೆ ಎಲ್ಲರು ಕಾಳಜಿಯನ್ನು ವಹಿಸಬೇಕಿದೆ. ಪರಿಸರ ನಾಶವಾದರೆ ಮನುಕುಲಕ್ಕೆ ಆಪತ್ತು ಇದೆ ಇದ್ದಲ್ಲದೆ ಸೂರ್ಯನಿಂದ ಸಿಗುವಂತೆ ಉಚಿತವಾದ ಶಾಖವನ್ನು ಬಳಕೆ ಮಾಡಿಕೊಂಡು ವಿದ್ಯುತ್ ಆಗಿ ಪರಿವರ್ತನೆ ಮಾಡಿಕೊಂಡು ಬಳಕೆ ಮಾಡಿಕೊಂಡು ಮಾರಾಟವನ್ನು ಸಹಾ ಮಾಡಬಹುದಾಗಿದೆ ಎಂದು ರೋಟರಿ ಕ್ಲಬ್ ಚಿನ್ಮೂಲಾದ್ರಿಯ ಅಧ್ಯಕ್ಷರಾದ ಮಂಜುನಾಥ್ ಭಾಗತ್ ತಿಳಿಸಿದರು.

ಚಿತ್ರದುರ್ಗ ನಗರದ ವಿ.ಪಿ.ಬಡಾವಣೆಯಲ್ಲಿನ ಸೆಲ್ಕೋ ಸೋಲಾರ್ ಸಂಸ್ಥೆಯ ಆವರಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಸಸಿ ನೆಡುವ ಮತ್ತು ನವೀಕರಿಸಬಹುದಾದ ಇಂಧನದ ಸಾಧ್ಯತೆಗಳ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇಂದಿನ ದಿನಮಾನದಲ್ಲಿ ತಾಪಮಾನ ಹೆಚ್ಚಾಗುತ್ತಿದೆ ಇದನ್ನು ಕಡಿಮೆ ಮಾಡಲು ಮರ-ಗಿಡಗಳಿಂದ ಮಾತ್ರ ಸಾಧ್ಯವಿದೆ ಆದರೆ ನಾವುಗಳು ಅಭೀವೃದ್ದಿಯ ನೆಪದಲ್ಲಿ ಮರಗಳನ್ನು ಕಡಿದು ಹಾಕುತ್ತಿದ್ದೇವೆ, ಮತ್ತೇ ಸಸಿಗಳನ್ನು ನೆಡುವ ಕಾರ್ಯವಾಗಬೇಕಿದೆ. ಇದರಿಂದ ಮಾತ್ರ ನಮ್ಮ ತಾಪಮಾನ ಕಡಿಮೆಯಾಗುತ್ತದೆ ಎಂದರು.ಇತ್ತಿಚಿನ ದಿನಮಾನದಲ್ಲಿ ಎಲ್ಲರು ಸಹಾ ವಿದ್ಯುತ್ ಬಳಕೆಯನ್ನು ಹೆಚ್ಚಾಗಿ ಮಾಡುತ್ತಿದ್ದಾರೆ ಆದರೆ ಉತ್ಪಾದನೆ ಮಾತ್ರ ಕಡಿಮೆ ಇದೆ.

## ಕ್ರಿಕೆಟ್ ಗೆಲುವು, ನಗರದೆಲ್ಲೆಡೆ ಸಂಭ್ರಮಾಚರಣೆ

ದಾವಣಗೆರೆ: ವೆಸ್ಟ್ ಇಂಡೀಸ್ ದೇಶದ ಬ್ರಿಡ್ಜ್ ಟೌನ್ ನಲ್ಲಿ ನಡೆದ ಟಿ20 ವಿಶ್ವ ಕಪ್ ಅಂತಿಮ ಪಂದ್ಯದಲ್ಲಿ ಭಾರತದ ಬೌಲರ್‌ಗಳು ಕೊನೆಯ ಹಂತದಲ್ಲಿ ತೋರಿದ ಅದ್ಭುತ ಪ್ರದರ್ಶನದಿಂದ ರೋಚಕ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ದಾವಣಗೆರೆ ನಗರದ ಎಲ್ಲೆಡೆ ಸಂಭ್ರಮ ಮನೆ ಮಾಡಿತ್ತು. ಕೊನೆಯ ಹಂತದವರೆಗೆ ಒತ್ತಡಕ್ಕೆ ಸಿಲುಕಿದ್ದ ಭಾರತದ ತಂಡವನ್ನು ಕೊನೆಯ ಹಂತದಲ್ಲಿ ಸೂರ್ಯ ಕುಮಾರ್ ಹಿಡಿದ ಕ್ಯಾಚ್ ನಿಂದಾಗಿ ಭಾರತ ರೋಚಕ ಗೆಲುವು ಸಾಧಿಸಿದ ಕಾರಣ ನಗರದ ಪ್ರಮುಖ ವೃತ್ತಗಳು, ಮುಖ್ಯ ರಸ್ತೆಯಲ್ಲಿ ಅಭಿಮಾನಿಗಳು ಸಿಹಿ ಹಂಚಿ ಸಂತಸ ಪಟ್ಟರು.

**ಪ್ರಮುಖ ಸುದ್ದಿ**

### ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸೂಚನೆ

# ಭದ್ರಾ, ರೈಲ್ವೆ ಯೋಜನೆ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಿ

» **ಚಿತ್ರದುರ್ಗ**

ಭದ್ರಾ ಮೇಲ್ದಂಡೆ ಯೋಜನೆ ಹಾಗೂ ದಾವಣಗೆರೆ-ತುಮಕೂರು ನೇರ ರೈಲ್ವೆ ಯೋಜನೆ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವನಿಟ್ಟಿನಲ್ಲಿಅಧಿಕಾರಿಗಳು ಅಗತ್ಯಕ್ರಮವಹಿಸಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸೂಚನೆ ನೀಡಿದರು.

ಹಿರಿಯೂರು ನಗರಸಭೆ ಸಭಾಂಗಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಭದ್ರಾ ಮೇಲ್ದಂಡೆ ಯೋಜನೆ, ನೇರ ರೈಲ್ವೆ ಯೋಜನೆ ಹಾಗೂ ಕೆಐಡಿಬಿ ಇಲಾಖೆಗಳ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಭದ್ರಾ ಮೇಲ್ದಂಡೆ ಯೋಜನೆ, ನೇರ ರೈಲ್ವೆ ಯೋಜನೆ, ಕೈಗಾರಿಕಾ ಕಾರಿಡಾರ್ ಯೋಜನೆಗಳನ್ನುನಿಗಧಿತಸಮಯದೊಳಗೆ ಪೂರ್ಣಗೊಳಿಸಬೇಕು. ಚುನಾವಣಾ ನೀತಿ ಸಂಹಿತೆಯಿಂದಾಗಿ ಯೋಜನೆ ಕಾಮಗಾರಿಗಳು ಮಂದಗತಿಯಾಗಿದ್ದು, ಇದೀಗ ಯೋಜನೆಗಳ ಪೂರ್ಣಗೊಳಿಸಲು ವೇಗ ನೀಡಲಾಗುವುದು ಎಂದರು.



ಬೋರನಕಣಿವೆ ಜಲಾಶಯದ ವಿವರ ಪರಿಶೀಲಿಸಿ ಹೆಚ್ಚಿನ ನೀರಿನ ಅಲೋಕೇಶನ್ ತಂದು ಅಲ್ಲಿಂದ ಗಾಯಿತ್ರಿ ಜಲಾಶಯಕ್ಕೆ ತರಲು ಕ್ರಮವಹಿಸಲಾಗುವುದು. ಹೊಸಹಳ್ಳಿ ಬ್ಯಾರೇಜ್‌ನ ವಿದ್ಯುತ್ ಸಮಸ್ಯೆಯನ್ನು ಆ ಭಾಗದ ರೈತರೊಂದಿಗೆ ಚರ್ಚಿಸಿ ಶೀಘ್ರ ಬಗೆಹರಿಸಿ ಬಹುದೊಡ್ಡ ಈ ಯೋಜನೆಗಳನ್ನು ಆದಷ್ಟು ಶೀಘ್ರವಾಗಿ ಪೂರ್ಣಗೊಳಿಸಿ, ಸಾರ್ವಜನಿಕರ ಉಪಯೋಗಕ್ಕೆ ನೀಡಬೇಕಿದೆ ಎಂದರು.

ಕೆಐಡಿಬಿ ಅಧಿಕಾರಿ ಲಕ್ಷ್ಮೀಶ್ ಮಾತನಾಡಿ ಮೇಟಿಕುರ್ಕೆ ಕೈಗಾರಿಕಾ ಕಾರಿಡಾರ್ ಯೋಜನೆಯ 1156 ಎಕರೆ ಪ್ರದೇಶದಲ್ಲಿ 920 ಎಕರೆ ಪ್ರದೇಶದ ರೈತರಿಗೆ ಪರಿಹಾರ ನೀಡಲಾಗಿದೆ. ಇನ್ನೂ 336 ಎಕರೆಗೆ ಪರಿಹಾರ ಕೊಡಬೇಕು. ಇಲ್ಲಿಯವರೆಗೆ ರೂ.380 ಕೋಟಿ ಬಿಡುಗಡೆ ಮಾಡಿದೆ. ಅದರಲ್ಲಿ ರೂ.312 ಕೋಟಿ ಪರಿಹಾರ ನೀಡಲಾಗಿದೆ. ಮೇಟಿಕುರ್ಕೆ ಕರಿಯೋಬನಹಳ್ಳಿಯಲ್ಲಿ ಲೇಔಟ್ ಅನುಮೋದನೆ ಆಗಿದೆ. ನಾಲ್ಕರಲ್ಲಿ ಮೂರು ಪ್ಯಾಕೇಜ್ ವರ್ಕ್ ಅವಾರ್ಡ್ ಆಗಿದ್ದು ಕೆಲಸ ನಡೆಯುತ್ತಿದೆ. ಒಂದರಲ್ಲಿ ಕೆಲಸ ಶುರುವಾಗಬೇಕಿದೆ. 1156 ಎಕರೆ ಪ್ರದೇಶದಲ್ಲಿ 764 ಎಕರೆ ಕೈಗಾರಿಕಾ ಪ್ರದೇಶವಾಗಿದ್ದು, ಉಳಿದ ಪ್ರದೇಶದಲ್ಲಿ ಉದ್ಯಾನವನ, ಆಸ್ಪತ್ರೆ, ವಸತಿ ಗೃಹಗಳಿಗೆ ಮೀಸಲಿರಿಸಲಾಗಿದೆ ಎಂದರು.

ದಾವಣಗೆರೆ-ತುಮಕೂರು ನೇರ ರೈಲ್ವೆ ಯೋಜನೆಗೆ 1210 ಎಕರೆ ಬೇಕಾಗಿದ್ದು, ಹಿರಿಯೂರಿನಲ್ಲಿ 55 ಕಿಮೀ ಹಾದು ಹೋಗಲಿದೆ. ತಾಲ್ಲೂಕಿನಲ್ಲಿ 113 ಎಕರೆ ಭೂ ಸ್ವಾಧೀನ ಬಾಕಿಯಿದೆ. ಎರಡು ತಿಂಗಳಲ್ಲಿ 70 ಎಕರೆ ಭೂ ಸ್ವಾಧೀನಪಡಿಸಿಕೊಂಡು ಕೆಲಸ ಪ್ರಾರಂಭ ಮಾಡಲಾಗುವುದು ಎಂದು ವಿಶೇಷ ಭೂಸ್ವಾಧೀನಾಧಿಕಾರಿ ವಿವೇಕ್ ಸಭೆಗೆ ಮಾಹಿತಿ ನೀಡಿದರು.

ಭದ್ರಾ ಮೇಲ್ದಂಡೆ ಯೋಜನೆ ಮುಖ್ಯ ಎಂಜಿನಿಯರ್ ಎಸ್.ಎಚ್.ಲಮಾಣಿ ಮಾತನಾಡಿ, ಭದ್ರಾ ಮೇಲ್ದಂಡೆ ಯೋಜನೆಯಿಂದ ಅನುಮೋದನೆ ಆಗಿರುವ ಕೆರೆಗಳಿಗೆ ನೀರು ಬರಲಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಜವನಗೊಂಡನಹಳ್ಳಿ ಹಾಗೂ ಕರಿಯಾಲ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಹಳ್ಳಿಗಳಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗಿದೆ. ನಮಗೆ ನೀರಿನ ಸಮಸ್ಯೆ ಬಗೆಹರಿಸಬೇಕು ಎಂದು ಕರಿಯಾಲ ಗ್ರಾಮ ಪಂಚಾಯಿತಿ ಅಧ್ಯಕ್ಷ ರಮೇಶ್ ಅವರು ಸಚಿವರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

**ಫಾಸ್ಟ್ ನ್ಯೂಸ್**

## ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವಾರ್ಷಿಕೋತ್ಸವ



» **ಹೊಸದುರ್ಗ**

ಶ್ರೀ ಕ್ಷೇತ್ರ ಧರ್ಮಸ್ಥಳದ ಹಾಲುರಾಮೇಶ್ವರ ಯೋಜನಾ ಕಛೇರಿ ವ್ಯಾಪ್ತಿಯ ತಾಲೂಕಿನ ಬಜ್ಜಪ್ಪನಹಟ್ಟಿ ವಿನಾಯಕ ಜ್ಞಾನವಿಕಾಸ ಕೇಂದ್ರದ ವಾರ್ಷಿಕೋತ್ಸವ ಕಾರ್ಯಕ್ರಮವನ್ನ ಹಮ್ಮಿಕೊಳ್ಳಲಾಗಿತ್ತು.ತಾಲೂಕಿನಯೋಜನಾಧಿಕಾರಿ ಚಂದ್ರಶೇಖರ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಇಂದಿನ ದಿನದಲ್ಲಿ ಮಹಿಳೆಯರು ಎಲ್ಲಾ ರಂಗಗಳಲ್ಲೂ ಗುರುತಿಸಿಕೊಳ್ಳುವುದು ಅತಿ ಅವಶ್ಯಕವಾಗಿದೆ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ಮಹಿಳೆಯರು ಸಾಮಾಜಿಕ ಮುಖ್ಯ ವಾಹಿನಿಯಲ್ಲಿ ಆರ್ಥಿಕವಾಗಿ ಶೈಕ್ಷಣಿಕವಾಗಿ ಬೌದ್ಧಿಕವಾಗಿ ಸದೃಢವಾಗಿ ಬೆಳೆಯುವ ನಿಟ್ಟಿನಲ್ಲಿ ಹಲವಾರು ಕಾರ್ಯಕ್ರಮಗಳನ್ನು ನಮ್ಮ ಸಂಸ್ಥೆ ಕೊಡುಗೆಯಾಗಿ ನೀಡುತ್ತಿರುವುದು ಶ್ಲಾಘನೀಯ ವೆಂದರು ಸಮಾಜದ ಒಂದು ಕಡೆಯ ವ್ಯಕ್ತಿಯನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಪೂಜ್ಯ ವೀರೇಂದ್ರ ಹೆಗ್ಗಡೆಯವರು ಹಾಗೂ ಮಾತೃ ಶ್ರೀ ಹೇಮಾವತಿ ಅಮ್ಮನವರು ಜ್ಞಾನವಿಕಾಸ ಕಾರ್ಯಕ್ರಮದ ಮೂಲಕ ಮಹಿಳೆಯರಿಗೆ ಅರಿವು ಮೂಡಿಸಿ ಅವರ ಕುಟುಂಬವನ್ನು ಬಲಪಡಿಸುವ ಉದ್ದೇಶದಿಂದ ಹಲವಾರು ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ ಎಂದರುಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶ್ರೀ ಮತಿ ಲಲಿತಮ್ಮ ಮಾತನಾಡಿ ಆರೋಗ್ಯಕರ ಆಹಾರ ಸೇವನೆ ಆರೋಗ್ಯಕ್ಕೆ ಸ್ಥಳೀಯವಾಗಿ ಸಿಗುವ ಸೊಪ್ಪು ತರಕಾರಿ ಹಣ್ಣುಗಳು ಹಾಲು ಮತ್ತು ಹಾಲಿನ ಉತ್ಪನ್ನಗಳು ಸೇವನೆ ಮಾಡುವುದರಿಂದ ಆರೋಗ್ಯದಲ್ಲಿ ಉತ್ತಮ ದೃಢತೆ ಹಾಗೂ ಹೊಸ ಶಕ್ತಿ ನಿಡುತ್ತದೆ ಎಂದರು ಆರೋಗ್ಯ ನಿರೀಕ್ಷಣಾಧಿಕಾರಿ ಅಲೀಂಪಾಶ, ಗ್ರಾಮಸ್ಥರಾದ ಶಾಂತಕುಮಾರ್, ಮುಖ್ಯ ಶಿಕ್ಷಕರಾದ ರಂಗಪ್ಪ, ಜ್ಞಾನ ವಿಕಾಸ ಕೇಂದ್ರದ ಅಧ್ಯಕ್ಷರಾದ ಆಶಾ , ಜ್ಞಾನ ವಿಕಾಸ ಕೇಂದ್ರದ ಸದಸ್ಯರು ಉಪಸ್ಥಿತರಿದ್ದರು , ಆಟೋಟ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣೆ ಮಾಡಲಾಯಿತುಈ ಕಾರ್ಯಕ್ರಮವನ್ನು ಗಂಗಮ್ಮ ಜ್ಞಾನ ವಿಕಾಸ ಸಮನ್ವಯಾಧಿಕಾರಿ ನಿರೂಪಿಸಿದರು ರಾಜೇಶ್ವರಿ ಸ್ವಾಗತಿಸಿದರು ಕಮಲಮ್ಮ ಸೇವಾ ಪ್ರತಿನಿಧಿ ವಂದಿಸಿದರು"

## ಗ್ರಾಮೀಣ ಭಾಗದ ಮಹಿಳೆಯರ ಆರ್ಥಿಕ ಸ್ವಾವಲಂಬನೆ ಸಾಧನೆಗೆ ಗ್ರಾಮಾಭಿವೃದ್ಧಿಯೋಜನೆ ಶ್ರೀರಕ್ಷೆ : ಶೈಲಮ್ಮ



» **ಚಳ್ಳಕೆರೆ**

ಗ್ರಾಮೀಣ ಭಾಗಗಳಲ್ಲಿ ಸ್ವಸಹಾಯ ಸಂಘಗಳ ಮೂಲಕ ಮಹಿಳೆಯರಿಗೆ ಆರ್ಥಿಕ ಶಕ್ತಿಯನ್ನು ತುಂಬುವುದರಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿಯೋಜನೆಹೆಚ್ಚುಸಹಕಾರಿಯಾಗಿದೆ. ಸಾವಿರಾರು ಮಹಿಳೆಯರು ಈ ಯೋಜನೆಗಳ ಫಲವನ್ನು ಪಡೆಯಲು ಮುಂದಾಗಬೇಕು. ಆರ್ಥಿಕ ಮುನ್ನಡೆಗೆ ಮಹಿಳೆಯರು ಮುಂದಾಗಬೇಕು ಎಂದು ಗಂಜಿಗುಂಟೆ ಗ್ರಾಮ ಪಂಚಾಯಿತಿ ಸದಸ್ಯೆ ಶೈಲಮ್ಮ ತಿಳಿಸಿದರು. ಅವರು, ಸೋಮವಾರ ಸಾಣೀಕೆರೆ ವಲಯದ ಗಂಜಿಗುಂಟೆ ಗ್ರಾಮದಲ್ಲಿ ಭೂಮಿಕ ಜ್ಞಾನವಿಕಾಸ ಕೇಂದ್ರದ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಸಂಪನ್ಮೂಲ ವ್ಯಕ್ತಿ, ವಕೀಲೆ ಸುಮಲತಾ ಮಹಿಳಾಜಾಗತೀಕರಣ ವಿಷಯದ ಬಗ್ಗೆ ಮಾತನಾಡಿ, ಕಳೆದ ಹಲವಾರು ದಶಕಗಳಿಂದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಾವಿರಾರು ಮಹಿಳೆಯರಿಗೆ ಸ್ವಸಹಾಯಕ ಗುಂಪುಗಳನ್ನು ರಚಿಸಿಕೊಂಡು ಆರ್ಥಿಕ ಸ್ಥಿತಿ ಸುಧಾರಣೆಗೆ ಸಹಕಾರ ನೀಡುತ್ತಾ ಬಂದಿದೆ. ಮಹಿಳೆ ಕೇವಲ ಮನೆಯೊಳಗಷ್ಟೇಯಲ್ಲದೆ, ಮನೆಯ ಹೊರಗೂ ತನ್ನ ಜವಾಬ್ದಾರಿ ನಿಬಾಯಿಸಬಲ್ಲಳು ಎಂಬುವುದಕ್ಕೆ ಇಂದಿನ ಕಾರ್ಯಕ್ರಮವೇ ಸಾಕ್ಷಿಯಾಗಿದೆ ಎಂದರು. ಕಾರ್ಯಕ್ರಮದಲ್ಲಿ ಒಕ್ಕೂಟದ ಅಧ್ಯಕ್ಷೆ ಲತಾ, ಸಮನ್ವಯಾಧಿಕಾರಿ ಇಂದಿರಾಭವಾನಿ, ಸೇವಾಪ್ರತಿನಿಧಿ ಹೇಮಲತಾ ಮುಂತಾದವರು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T